ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೫

# ಪಟ್ಟಿ – ೧೮

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಮಂಗಳವಾರ, ದಿನಾಂಕ : ೨೩ನೇ ಮಾರ್ಚ್, ೨೦೨೧

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ಸಕ್ಕರೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

೭. ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.

---

## ಬೀದರ್ ನಗರದಲ್ಲಿ ನಗರೋತ್ಥಾನ–೩ ಕಾಮಗಾರಿಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೨೦ (೧೯೩೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ನಗರೋತ್ಥಾನ–೩ರ ಹಾಗೂ ನಗರೋತ್ಥಾನ, ವಿಶೇಷ ಯೋಜನೆಯಡಿಯಲ್ಲಿ ೨೦೧೭–೧೮ರಲ್ಲಿ ಮಂಜೂರಾಗಿ ಕೈಗೊಳ್ಳಲಾದ ಕಾಮಗಾರಿಗಳು ಇಲ್ಲಿಯವರೆಗೆ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವು ಯಾವುವು ; ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಜಿಲ್ಲೆಯಲ್ಲಿ ನಗರೋತ್ಥಾನ–೩ರ ಹಾಗೂ ನಗರೋತ್ಥಾನ, ವಿಶೇಷ ಯೋಜನೆಯಡಿಯಲ್ಲಿ ೨೦೧೭–೧೮ರಲ್ಲಿ ಮಂಜೂರಾದ ಕಾಮಗಾರಿಗೆ ಬಂದಿರುವ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ರೈತರ ಸಾಲ ಮನ್ನಾ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೨೧ (೧೯೩೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೮ ರಿಂದ ೨೦೨೧ರವರೆಗೆ ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ; ಮಾಡಿದ್ದಲ್ಲಿ, ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ೨೦೧೮–೨೦೧೯ ರಿಂದ ೨೦೨೦–೨೦೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ವಿವಿಧ ಬ್ಯಾಂಕ್‌ಗಳಲ್ಲಿ ರೈತರು ಎಷ್ಟು ಮೊತ್ತದ

ಸಾಲ ಪಡೆದಿದ್ದಾರೆ ; ಪಡೆದಿದ್ದಲ್ಲಿ, ಬ್ಯಾಂಕ್‌ವಾರು ವಿವರ ನೀಡುವುದು ;

(ಇ) ರೈತರ ಸಾಲ ಮನ್ನಾ ಮಾಡಲು ಸರ್ಕಾರದ ನಿಯಮಗಳೇನು ; ಯಾವ ಯಾವ ಬೆಳೆಗಳಿಗೆ ಸಾಲ ಮನ್ನಾ ಮಾಡಲಾಗಿದೆ ?

## ಬೀದರ್ ಜಿಲ್ಲೆಯಲ್ಲಿ ೨೦೧೮-೧೯ನೇ ಸಾಲಿನ ಎಸ್.ಎಫ್.ಸಿ (ವಿಶೇಷ) ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೨೨ (೧೯೩೪) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ನಗರಸಭೆ/ಪುರಸಭೆಗಳಿಗೆ ಎಸ್.ಎಫ್.ಸಿ (ವಿಶೇಷ) ಯೋಜನೆಗಳ ಅಡಿಯಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಹಾಗೂ ವೆಚ್ಚವಾದ ಅನುದಾನ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಜಿಲ್ಲೆಯು ನಗರಸಭೆ/ಪುರಸಭೆಗಳಿಗೆ ಈ ಯೋಜನೆಯಡಿಯಲ್ಲಿ ನೀಡಲಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ಜಿಲ್ಲೆಯ ನಗರಸಭೆ/ಪುರಸಭೆಗಳಲ್ಲಿ ಈ ಯೋಜನೆಯಡಿಯಲ್ಲಿ ಪೂರ್ಣಗೊಂಡ ಕಾಮಗಾರಿಗಳು ಯಾವುವು; ಪೂರ್ಣಗೊಳ್ಳದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಬೀದರ್ ಜಿಲ್ಲೆಯಲ್ಲಿ ಅನಧಿಕೃತವಾಗಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೨೩ (೧೯೩೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಅನುಮತಿ ಪಡೆದು ನಡೆಸುತ್ತಿರುವ ಕಲ್ಲು ಗಣಿಗಾರಿಕೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಈ ಗಣಿಗಾರಿಕೆಗಳು ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಅನಧಿಕೃತವಾಗಿ ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಕ್ರಮ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಗ್ರಾಹಕರ ಹಕ್ಕು ರಕ್ಷಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೪ (೧೯೨೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಹಕರ ಹಿತರಕ್ಷಣಾ ಕಾಯಿದೆಯಲ್ಲಿ ಗ್ರಾಹಕರಿಗೆ ಯಾವ ಯಾವ ಪರಿಹಾರಗಳನ್ನು ಪಡೆಯಲು ಅವಕಾಶ ಇದೆ ; (ಇದರ ಬಗ್ಗೆ ವಿವರಣೆ ನೀಡುವುದು)

(ಆ) ಗ್ರಾಹಕರಿಗೆ ವಂಚನೆಯಾದಾಗ ಈ ಬಗ್ಗೆ ದೂರು ನೀಡಲು ಮತ್ತು ಗ್ರಾಹಕರ ಹಕ್ಕುಗಳ ಬಗ್ಗೆ ಮಾಹಿತಿ ನೀಡಲು ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕಗಳನ್ನು ಹಾಕುವ ಪದ್ಧತಿ ಇದೆಯೇ ; ಜನರಿಗೆ ಈ ಬಗ್ಗೆ ತಿಳುವಳಿಕೆ ನೀಡಲು ಯಾವ ಕ್ರಮ ಅನುಸರಿಸಲಾಗುತ್ತಿದೆ ;

(ಇ) ಗ್ರಾಹಕರಿಗೆ ವಂಚನೆ ಮಾಡಿರುವ ಎಷ್ಟು ದೂರುಗಳು ಕಳೆದ ೨ ವರ್ಷಗಳಲ್ಲಿ ದಾಖಲಾಗಿವೆ; ಎಷ್ಟು ಜನರ ಮೇಲೆ ಮೊಕದ್ದಮೆ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ ?

## ಗೃಹ ನಿರ್ಮಾಣ ಸಹಕಾರ ಸಂಘಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೫ (೧೯೨೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಈ ಎಲ್ಲಾ ಸಂಘಗಳಿಗೂ ಮಾನ್ಯತೆ ನೀಡಲಾಗಿದೆಯೇ ;

(ಆ) ಸದರಿ ಗೃಹ ನಿರ್ಮಾಣ ಸಹಕಾರ ಸಂಘಗಳನ್ನು ಅವುಗಳ ಚಟುವಟಿಕೆ, ಹಣಕಾಸಿನ ಪರಿಸ್ಥಿತಿ, ನಡೆಸುತ್ತಿರುವ ವಹಿವಾಟುಗಳ ಆಧಾರದ ಮೇಲೆ ಎ,ಬಿ.ಸಿ,ಡಿ ಎಂದು ವರ್ಗೀಕರಣ ಮಾಡಲಾಗಿದೆಯೇ ;

(ಇ) ಕಾನೂನುಬಾಹಿರ ಚಟುವಟಿಕೆಗಳ ಕಾರಣದಿಂದ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳ ವಿರುದ್ಧ ವಿಚಾರಣೆ ನಡೆಯುತ್ತಿದೆ ;

(ಈ) ತಪ್ಪಿತಸ್ಥ ಸಹಕಾರ ಸಂಘಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಎಷ್ಟು ಸಂಘಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕಾಗಿದೆ ? (ವಿವರಿಸುವುದು)

## ರಾಜ್ಯದಲ್ಲಿ ಗಣಿಗಾರಿಕೆ ಮತ್ತು ಕಾರ್ಮಿಕರ ಸಮಸ್ಯೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೨೬ (೧೯೬೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಯಾವ ಯಾವ ಪ್ರದೇಶಗಳನ್ನು ಗಣಿಗಾರಿಕೆ ಎಂದು ಗುರುತಿಸಲಾಗಿದೆ ; (ಪ್ರತ್ಯೇಕ ವಿವರ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಸದರಿ ಗಣಿಗಾರಿಕೆಗಳಲ್ಲಿ ತೊಡಗಿಸಿಕೊಂಡಿರುವ ವ್ಯಕ್ತಿ ಮತ್ತು ಸಂಸ್ಥೆಗಳ ಅಂದಾಜು ಸರ್ಕಾರಕ್ಕಿದೆಯೇ ; (ಜಿಲ್ಲಾವಾರು ಗಣಿಗಾರಿಕೆ ವ್ಯಕ್ತಿ, ಸಂಸ್ಥೆಗಳ ಕುರಿತಾಗಿ ಪ್ರತ್ಯೇಕ ಮಾಹಿತಿಯನ್ನು ಒದಗಿಸುವುದು)

(ಇ) ಸದರಿ ಗಣಿಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಅಂದಾಜು ಸಂಖ್ಯೆ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಕಳೆದ ೩ ವರ್ಷಗಳ ಅವಧಿಯ ಜಿಲ್ಲಾವಾರು ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಈ) ಇತ್ತೀಚಿನ ದಿನಗಳಲ್ಲಿ ವಿವಿಧ ರೀತಿಯ ಅಕ್ರಮ ಗಣಿಕಾರಿಕೆ, ಸ್ಫೋಟ, ಕಾರ್ಮಿಕರ ಸಾವು, ನೋವು ಕುರಿತಾಗಿ ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತಾಗಿ ಕೈಗೊಂಡ ಕ್ರಮ, ಸರ್ಕಾರದ ಆಲೋಚನೆ ಏನು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಶ್ರವಣಬೆಳಗೊಳವನ್ನು ಪಟ್ಟಣ ಪಂಚಾಯಿತಿಯಾಗಿ ರಚಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೭ (೧೯೧೦) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾವುದೇ ಹೋಬಳಿ ಕೇಂದ್ರ ಅಥವಾ ಗ್ರಾಮವನ್ನು ಕೇಂದ್ರವನ್ನಾಗಿಸಿಕೊಂಡು ಹೊಸ ಪಟ್ಟಣ ಪಂಚಾಯಿತಿ ರಚನೆ ಮಾಡಲು ಇರಬೇಕಾದ ಅರ್ಹತೆ/ಮಾನದಂಡಗಳೇನು ; (ಆದೇಶ ಸಹಿತ ವಿವರ ನೀಡುವುದು)

(ಆ) ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ಕೇಂದ್ರವು ಧಾರ್ಮಿಕ, ಶೈಕ್ಷಣಿಕ ಮತ್ತು ವಾಣಿಜ್ಯ ಕೇಂದ್ರವಾಗಿ ಬೆಳವಣಿಗೆ ಹೊಂದಿದ್ದು, ಶ್ರವಣಬೆಳಗೊಳ ಮತ್ತು ಇದರ ಅಕ್ಕ ಪಕ್ಕದಲ್ಲಿರುವ ಗ್ರಾಮಗಳನ್ನು ಸೇರಿಸಿಕೊಂಡು ಶ್ರವಣಬೆಳಗೊಳವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ ಅಥವಾ ಶ್ರವಣಬೆಳಗೊಳವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

## ಸರ್ಕಾರಿ ಭೂಮಿಯ ಅತಿಕ್ರಮಣದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೨೮ (೧೯೧೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಭೂ ಅತಿಕ್ರಮಣಕ್ಕೆ ಸಂಬಂಧಿಸಿದಂತೆ ಬಿಎಂಟಿಎಫ್ ರವರಿಗೆ ಸ್ವೀಕೃತವಾದ ದೂರು ಅರ್ಜಿಗಳು ಎಷ್ಟು; ಇದರಲ್ಲಿ, ವಿವಿಧ ಕಾಯ್ದೆಗಳಡಿ ಸರ್ಕಾರಿ ನೌಕರರ ವಿರುದ್ಧ, ಸಾರ್ವಜನಿಕರ ವಿರುದ್ಧ ಮತ್ತು ಸಂಘ ಸಂಸ್ಥೆಗಳ ವಿರುದ್ಧ ದಾಖಲಾಗಿರುವ ದೂರುಗಳು ಎಷ್ಟು ; (ದೂರು ಅರ್ಜಿ ಮತ್ತು ಇತರೆ ದಾಖಲೆಗಳ ಸಹಿತ ಮಾಹಿತಿ ನೀಡುವುದು)

(ಆ) ಈ ಅರ್ಜಿಗಳ ಪೈಕಿ ವಿಲೇವಾರಿಯಾದ ದೂರು ಅರ್ಜಿಗಳು ಎಷ್ಟು; (ಪ್ರಕರಣವಾರು ಮಾಹಿತಿ ನೀಡುವುದು) ವಿಲೇವಾರಿಯಾಗದ ದೂರು ಅರ್ಜಿಗಳು ಎಷ್ಟು; ಇವು ಬಾಕಿ ಉಳಿಯಲು ಕಾರಣಗಳೇನು; (ಪ್ರಕರಣವಾರು ಮಾಹಿತಿ ನೀಡುವುದು) ಬಾಕಿ ಉಳಿದಿರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ವಿಲೇವಾರಿ ಮಾಡಲಾಗುವುದು ; (ಪ್ರಕರಣವಾರು ವಿವರ ನೀಡುವುದು)

(ಇ) ಭೂ ಅತಿಕ್ರಮಣ ಮಾಡಿದವರ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ? (ಪ್ರಕರಣವಾರು ದಾಖಲೆಗಳ ಸಮೇತ ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೨೯ (೧೯೧೨) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾವ ರೀತಿಯ ಕೈಗಾರಿಕೆಗಳನ್ನು ಸಣ್ಣ ಕೈಗಾರಿಕೆಗಳೆಂದು ಪರಿಗಣಿಸಲಾಗುವುದು; ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು; ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಹಾಸನ ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ; ಈ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರೆಷ್ಟು; ಈ ಕೈಗಾರಿಕೆಗಳು ನೌಕರರಿಗೆ ಒದಗಿಸುತ್ತಿರುವ ಸೌಲಭ್ಯಗಳೇನು ; (ಕೈಗಾರಿಕೆಗಳ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಈ ಕೈಗಾರಿಕೆಗಳಿಗೆ ಮತ್ತು ನೌಕರರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು; ಈ ಕೈಗಾರಿಕೆಗಳಿಂದ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ? (ಕೈಗಾರಿಕೆವಾರು ಮಾಹಿತಿ ನೀಡುವುದು)

## ಸಣ್ಣ ಕೈಗಾರಿಕೆಯ ವಸಾಹತುಗಳ ಸ್ಥಾಪನೆಯ ಬಗ್ಗೆ

**ಶ್ರೀ ಕಾಂತ್‌ರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೦ (೧೯೬೧) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕೆ ಎಂದರೇನು; ಯಾವ ರೀತಿ ವರ್ಗೀಕರಣ ಮಾಡಲಾಗುತ್ತದೆ; ಸಣ್ಣ ಕೈಗಾರಿಕೆ ವ್ಯಾಖ್ಯೆಯಡಿ ಬರುವ ಕೈಗಾರಿಕೆಗಳಾವುವು ; (ವಲಯವಾರು ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳೆಷ್ಟು; ಅವು ಯಾವುವು ; ಜಿಲ್ಲಾವಾರು, ತಾಲ್ಲೂಕುವಾರು ಕ್ರಮವಾಗಿ ಕೈಗಾರಿಕೆಯ ಹೆಸರು ವಿಳಾಸ, ಉತ್ಪಾದಿಸುವ ವಸ್ತುವಿನೊಂದಿಗೆ ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿ ಸಣ್ಣ ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲು ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ; ಹಾಗೂ ಆ ಕಾಮಗಾರಿಗಳು ಯಾವ ಹಂತದಲ್ಲಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ? (ವಿವರವಾದ ಮಾಹಿತಿ ನೀಡುವುದು)

## ಎಂ.ಪಿ.ಎಮ್ ಕಾರ್ಖಾನೆಯನ್ನು ಖಾಸಗಿಯವರಿಗೆ ವಹಿಸುವ ಬಗ್ಗೆ

**ಶ್ರೀ ಕಾಂತ್‌ರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೧ (೧೯೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭದ್ರಾವತಿಯಲ್ಲಿರುವ ಮೈಸೂರು ಕಾಗದ ಕಾರ್ಖಾನೆ (MPM) ಯನ್ನು ಖಾಸಗಿಯವರಿಗೆ ವಹಿಸಲು ಟೆಂಡರ್ ಕರೆಯಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ಪ್ರತಿಷ್ಠಿತ ಮೈಸೂರು ಮಹಾರಾಜರಿಂದ ಸ್ಥಾಪಿಸಲ್ಪಟ್ಟ ಈ ಕಾರ್ಖಾನೆಯನ್ನು ಖಾಸಗಿಯವರಿಗೆ ವಹಿಸಲು ಕಾರಣಗಳೇನು ;

(ಇ) ಈ ಕಾರ್ಖಾನೆಗೆ ಕಚ್ಚಾವಸ್ತು ಬೆಳೆಯಲು ನೀಡಿರುವ ಭೂಮಿಯಲ್ಲಿ ಬೆಳೆದಿರುವ ಮರಗಳ ಇಂದಿನ ಮೌಲ್ಯವೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಕಾರ್ಖಾನೆಯನ್ನು ಖಾಸಗಿಯವರಿಗೆ ವಹಿಸದೆ ಸರ್ಕಾರವೇ ನಡೆಸಲು ಇರುವ ತೊಂದರೆಗಳೇನು ; (ವಿವರ ನೀಡುವುದು)

(ಉ) ಈ ಟೆಂಡರ್‌ನ್ನು ಯಾವಾಗ ರದ್ದುಗೊಳಿಸಲಾಗುವುದು ?

## ವಿನ್ಯಾಸ ನಕ್ಷೆ ಅನುಮೋದನೆ ಪಡೆಯದ ನಿವೇಶನಗಳಿಗೆ ತಾಂತ್ರಿಕ ಅಭಿಪ್ರಾಯ ನೀಡುವ ಬಗ್ಗೆ

**ಶ್ರೀ ಕಾಂತ್‌ರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೨ (೧೯೬೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯನ್ನು ಯಾವಾಗ ಸ್ಥಾಪಿಸಲಾಯಿತು; ಇದರ ಧ್ಯೇಯೋದ್ದೇಶಗಳೇನು ;

(ಆ) ನಗರ ಪಟ್ಟಣಗಳಿಗೆ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸುವ ಮುಂಚೆಯೇ ಭೂ ಪರಿವರ್ತನೆಯಾದ ಜಮೀನುಗಳನ್ನು ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೆಯೇ ಅನಧಿಕೃತವಾಗಿ ವಿಭಜಿಸದ ಸ್ಥಳೀಯ ಸಂಸ್ಥೆಗಳಲ್ಲಿ ಖಾತೆ ತೆರೆದ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಬಹುದೇ ; (ವಿವರವಾದ ಮಾಹಿತಿ ನೀಡುವುದು)

(ಇ) ಒಂದು ವೇಳೆ ಅಭಿಪ್ರಾಯ ನೀಡಬಾರದಾಗಿದ್ದರೆ ಇದಕ್ಕೆ ಕಾರಣಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ನಿವೇಶನಗಳನ್ನು ಯಾವಾಗ ಸಕ್ರಮ ಮಾಡಲಾಗುವುದು ?

## DISMS ಸೊಸೈಟಿಗಳ ಬಗ್ಗೆ

**ಶ್ರೀ ಕಾಂತ್‌ರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೩ (೧೯೫೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಕೈಗಾರಿಕಾ ಸರಬರಾಜು ಮಾರಾಟ ಸೊಸೈಟಿ (DISMS –District Industrial Supply Marketing Society) ಎಂದರೇನು; ಅವು ಯಾವುವು ; ಇವುಗಳನ್ನು ಯಾವ ಉದ್ದೇಶಕ್ಕಾಗಿ ಸ್ಥಾಪನೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಸೊಸೈಟಿಗಳು ನಡೆಸಿರುವ ವ್ಯವಹಾರಗಳೇನು; ಇದರಿಂದ ಬಂದ ಲಾಭ ಹಾಗೂ ನಷ್ಟವೆಷ್ಟು ; (ವರ್ಷವಾರು ಸೊಸೈಟಿವಾರು ವಿವರವಾಗಿ ಮಾಹಿತಿ ನೀಡುವುದು)

(ಇ) ಸದರಿ ಸೊಸೈಟಿಗಳಿಗೆ ಇರುವ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಯಾರ್ಯಾರು; ಇವರುಗಳ ಅಧಿಕಾರವೇನು ;

(ಈ) ತುಮಕೂರು ಜಿಲ್ಲೆಯಲ್ಲಿ ಈ ಸೊಸೈಟಿ ಇದೆಯೇ; ಹಾಗಾದರೆ, ಈ ಸೊಸೈಟಿ ಕಳೆದ ೧೫ ವರ್ಷಗಳಿಂದ ನಡೆಸಿರುವ ವ್ಯವಹಾರಗಳೇನು ; ಇದರಿಂದ ಬಂದ ಲಾಭವೆಷ್ಟು; ಆದ ನಷ್ಟವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ಬೆಳಗಾವಿಯೂ ಸೇರಿದಂತೆ ವಿವಿಧ ಮಹಾನಗರ ಪಾಲಿಕೆ ಚುನಾವಣೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೪ (೧೯೮೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಬೆಳಗಾವಿಯೂ ಸೇರಿದಂತೆ ರಾಜ್ಯದ ೬ ಮಹಾನಗರ ಪಾಲಿಕೆಗಳು ಚುನಾವಣೆಗಾಗಿ ಕಾಯುತ್ತಿದ್ದು, ಚುನಾವಣೆ ನಡೆಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಆ) ಮಹಾನಗರ ಪಾಲಿಕೆಗಳಲ್ಲಿ ಜನಪ್ರತಿನಿಧಿಗಳಿಲ್ಲದೆ ಜನಸಾಮಾನ್ಯರು ಸಮಸ್ಯೆ ಅನುಭವಿಸುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಇ) ಮಾರ್ಚ್ ೯, ೨೦೧೯ಕ್ಕೆ ಬೆಳಗಾವಿ ಪಾಲಿಕೆಯ ಅವಧಿ ಮುಗಿದಿದ್ದು, ಚುನಾವಣೆ ನಡೆಸುವ ಪ್ರಕ್ರಿಯೆಯ ಕುರಿತು ವಿವರ ನೀಡುವುದು ;

(ಈ) ನಿಯಮಗಳ ಪ್ರಕಾರ ಸ್ಥಳೀಯ ಸಂಸ್ಥೆಗಳ ಅವಧಿ ಮುಕ್ತಾಯಕ್ಕೆ ಒಂದು ವರ್ಷ ಮೊದಲೇ ಚುನಾವಣೆ ಸಲುವಾಗಿ ಎಲ್ಲವನ್ನು ಸಿದ್ಧಮಾಡಿಕೊಳ್ಳಬೇಕಾಗಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ?

## ಹೈನುಗಾರಿಕೆಯಲ್ಲಿ ತೊಡಗಬಯಸುವವರಿಗೆ ಸಾಲ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೫ (೧೯೭೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಭಾಗದ ಹೈನುಗಾರಿಕೆಯಲ್ಲಿ ತೊಡಗಬಯಸುವ ನಿರುದ್ಯೋಗಿಗಳಿಗೆ ಶೂನ್ಯ ಬಡ್ಡಿದರದಲ್ಲಿ ಸಾಲ ನೀಡುವ ಸರ್ಕಾರದ ಯೋಜನೆ ಯಾವ ಹಂತದಲ್ಲಿದೆ ;

(ಆ) ಸದರಿ ಯೋಜನೆಯ ಫಲಾನುಭವಿಗಳು ಹೊಂದಿರಬೇಕಾದ ಮಾನದಂಡಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಸದರಿ ಯೋಜನೆಗೊಳಪಟ್ಟ ಫಲಾನುಭವಿಗಳ / ತಿರಸ್ಕೃತ ಅರ್ಜಿಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸದರಿ ಯೋಜನೆಗೊಳಪಟ್ಟ ಫಲಾನುಭವಿಗಳ ಸಂಖ್ಯೆ ಹಾಗೂ ನೀಡಲಾದ ಮೊತ್ತವೆಷ್ಟು ? (ತಾಲ್ಲೂಕುವಾರು ವಿವರ ಒದಗಿಸುವುದು)

## ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೬ (೧೯೮೦) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಕ್ಕರೆ ಸಂಶೋಧನಾ ಸಂಸ್ಥೆಯಾದ ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯು ಮೂಲ ಸೌಲಭ್ಯಗಳ ಕೊರತೆಯಿಂದ ಚಟುವಟಿಕೆಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಸಕ್ಕರೆ ಸಂಸ್ಥೆಯನ್ನು ಮುಂಬಯಿಯ ವಸಂತದಾದಾ ಸಕ್ಕರೆ ಸಂಶೋಧನಾ ಸಂಸ್ಥೆ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯುನ್ನು ಯಾವಾಗ ಪ್ರಾರಂಭಿಸಲಾಯಿತು; ಇಲ್ಲಿಯವರೆಗಿನ ಸಂಸ್ಥೆಯ ಬೆಳವಣಿಗೆ ಮತ್ತು ಪ್ರಗತಿಯ ವಿವರ ಒದಗಿಸುವುದು; ಮತ್ತು ಸಂಸ್ಥೆಯ ಆರ್ಥಿಕ ಸಾಫಲ್ಯತೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ದೇಶದಲ್ಲಿ ಜೈವಿಕ ಇಂಧನಗಳು ಪ್ರಗತಿ ಕಾಣುತ್ತಿರುವ ಹಿನ್ನಲೆಯಲ್ಲಿ ರಾಜ್ಯವು ಬೆಳಗಾವಿಯು ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನುಒಂದು ಮಾದರಿ "ಶ್ರೇಷ್ಠ ಹಸಿರು ಇಂಧನ ಕೇಂದ್ರ" ವಾಗಿ (Center of Excellence for Green Energy) ಸ್ಥಾಪಿಸಲು ಕೈಗೊಂಡಿರುವ ಕ್ರಮಗಳೇನು ?

## ಕಲ್ಲು, ಜಲ್ಲಿ ಮತ್ತು ಮರಳುಗಳ ಅಕ್ರಮ ಗಣಿಗಾರಿಕೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೭ (೧೯೮೨) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ, ಕಲ್ಲು, ಜಲ್ಲಿ ಮತ್ತು ಮರಳುಗಳ ಬೇಡಿಕೆ ಹೆಚ್ಚುತ್ತಿರುವುದರ ಜೊತೆಗೆ ಗಣಿಗಾರಿಕೆ ಮಾಫಿಯಾ ಕೂಡಾ ಪ್ರಭಾವಿಯಾಗುತ್ತಿರುವ ವರದಿ ಸರ್ಕಾರದ ಗಮನಕ್ಕಿದೆಯೇ ;

(ಆ) ಅನಧಿಕೃತ ಗಣಿಗಾರಿಕೆ ತಡೆಯುವಲ್ಲಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಕಾರಣ ಎಂಬ ವರದಿ ಇದ್ದು, ಈ ಬಗ್ಗೆ ಸರ್ಕಾರದ ಉತ್ತರವೇನು ;

(ಇ) ರಾಜ್ಯದಲ್ಲಿನ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಮಂಜೂರಾದ ಹುದ್ದೆ, ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿ ಹುದ್ದೆಗಳೆಷ್ಟು ; (ಮಾಹಿತಿ ನೀಡುವುದು)

(ಈ) ೨೦೨೦-೨೧ನೇ ಸಾಲಿನಲ್ಲಿ ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು ;

(ಉ) ಕಳೆದ ೨ ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳೆಷ್ಟು ?

## ಅಂಗನವಾಡಿ ಕೇಂದ್ರಗಳಿಗೆ ಅವಧಿ ಪೂರ್ಣ ದಿನಾಂಕ ಹತ್ತಿರವಿರುವ ಆಹಾರ ಸರಬರಾಜು ಮಾಡುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೩೮ (೧೯೮೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಕ್ಕಳು ಅಪೌಷ್ಠಿಕತೆಯಿಂದ ಬಳಲಬಾರದೆಂಬ ಸದುದ್ದೇಶದಿಂದ ಅಂಗನವಾಡಿಗಳಿಗೆ ನೀಡಲಾಗುವ ಪುಷ್ಠಿ ಪೌಡರ್ (ಧಾನ್ಯಗಳ ಮಿಶ್ರಣ), ಹಾಲಿನ ಪುಡಿ ಮತ್ತು ಬೆಲ್ಲದಂತಹ ಆಹಾರ ಸಾಮಾಗ್ರಿಗಳ ಅವಧಿಪೂರ್ವ ದಿನಾಂಕ ಸಮೀಪವಿರುವಾಗ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೀಗೆ ಕೊನೆಯ ದಿನಾಂಕ ಸಮೀಪಿಸುತ್ತಿರುವಾಗ ಮಕ್ಕಳ ಪಾಲಕರಿಗೆ ಇದನ್ನು ಸರಬರಾಜು ಮಾಡುವುದರಿಂದ ಅನಕ್ಷರಸ್ಥ ಪಾಲಕರು ಇದನ್ನು ಮಕ್ಕಳಿಗೆ ನೀಡಿದ್ದಲ್ಲಿ ಚಿಕ್ಕ ಮಕ್ಕಳ ಆರೋಗ್ಯದ ಮೇಲೆ ಉಂಟಾಗುವ ವ್ಯತಿರಿಕ್ತ ಪರಿಣಾಮಕ್ಕೆ ಹೊಣೆ ಯಾರು ;

(ಇ) ಆಹಾರ ಸಾಮಾಗ್ರಿಗಳನ್ನು ಪ್ಯಾಕ್ ಆದ ಕೂಡಲೇ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ಅಂಗನವಾಡಿ ಕೇಂದ್ರಗಳಿಗೆ ಪೂರೈಕೆ ಮಾಡಲಾಗುವ ಆಹಾರ ಪದಾರ್ಥಗಳ ಪ್ರಮಾಣವೆಷ್ಟು ? (ವಿವರ ಹಾಗೂ ಪ್ರಮಾಣದ ಮಾಹಿತಿ ನೀಡುವುದು)

16

# ಅಲ್ಪಾವಧಿ ಸಾಲ ನೀಡುತ್ತಿರುವ ಸಂಸ್ಥೆಗಳಲ್ಲಿ ನಡೆಯುತ್ತಿರುವ ಅವ್ಯವಹಾರಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೬೩೯ (೧೯೩೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಗಿಂದ್ದಾಗ್ಗೆ ಯೋಜನೆ/ಘಟಕ ವೆಚ್ಚಗಳನ್ನು ಪರಿಷ್ಕರಿಸಿ, ಅವಶ್ಯವಿರುವಷ್ಟು ಅಗತ್ಯಕ್ಕೆ ತಕ್ಕಂತೆ ಸಹಕಾರ ಸಂಘಗಳ ಮೂಲಕ ಸಾಲ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆಯೇ;

(ಆ) ಸಾಲ ಪಡೆದಿರುವ ಫಲಾನುಭವಿಗಳಿಂದ ಸಾಲದ ಹೊರೆ ಬಾಕಿ ಇರುವ ಬಗ್ಗೆ ದೃಢೀಕರಣವನ್ನು ಪಡೆಯಲು ಇರುವ ಮಾನದಂಡಗಳೇನು; (ವಿವರ ಒದಗಿಸುವುದು)

(ಇ) ಶೂನ್ಯ ಬಡ್ಡಿ ದರದಲ್ಲಿ ನೀಡುತ್ತಿರುವ ಬೆಳೆ ಸಾಲದ ಮಿತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ದೀರ್ಘಾವಧಿ ಸಾಲಗಳ ಸಂಬಂಧ ರಿಯಾಯಿತಿ ಬಡ್ಡಿ ದರದಲ್ಲಿ ನೀಡುತ್ತಿರುವ ಸಾಲದ ಮಿತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಅಲ್ಪಾವಧಿ ಸಾಲ ನೀಡುತ್ತಿರುವ ಸಂಸ್ಥೆಗಳಲ್ಲಿ ಬಹಳಷ್ಟು ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರಿಸುವುದು)

## ಕೋಲಾರ ನಗರ ಸಭೆಯಲ್ಲಿನ ಹಿಂದಿನ ಪೌರಾಯುಕ್ತ/ನೌಕರರು ಇಲಾಖಾ  ವಿಚಾರಣೆ ಕೈಗೊಂಡ ನಂತರ ನಿಧನ ಹೊಂದಿದಲ್ಲಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೬೪೦ (೧೯೨೯) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಸಭೆಗಳಲ್ಲಿ ಪೌರಾಯುಕ್ತರ ಹುದ್ದೆಯಂತಹ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿರುವ ಹಾಗೂ ಕಾರ್ಯನಿರ್ವ-ಹಿಸುತ್ತಿರುವ ಅಧಿಕಾರಿ / ನೌಕರರುಗಳಿಂದ ಆರ್ಥಿಕ ನಷ್ಟವುಂಟಾದಾಗ ಅವರುಗಳ ಮೇಲೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ ೧೦೦(೨)ರ ಪ್ರಕಾರ ಆ ಅಧಿಕಾರಿ/ನೌಕರರು ನಿಧನ ಹೊಂದಿದ ನಂತರವೂ ಅವರ ಮೇಲೆ ವಿಚಾರಣೆ ನಡೆಸಲು ಅವಕಾಶವಿದೆಯೇ;

(ಆ) ಹಾಗಿದ್ದಲ್ಲಿ, ಕೋಲಾರ ನಗರ ಸಭೆಗೆ ಸಂಬಂಧಿಸಿದಂತೆ ಪೌರಾಯುಕ್ತರು ಹಾಗೂ ಇತರೆ ಅಧಿಕಾರಿಗಳು ಆರ್ಥಿಕ ನಷ್ಟ ಉಂಟು ಮಾಡಿದ್ದಾರೆಂದು ತಿಳಿಸಿ, ಅವರುಗಳ ಮೇಲೆ ಇಲಾಖಾ ವಿಚಾರಣೆ ಕೈಗೊಂಡ ನಂತರ ಅವರಲ್ಲಿ ಯಾರಾದರೂ ನಿಧನ ಹೊಂದಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಇಲಾಖಾ ವಿಚಾರಣೆಯನ್ನು ಕೈಬಿಡಲಾಗಿದೆಯೇ; (ವಿವರಗಳನ್ನು ನೀಡುವುದು)

(ಇ) ಕೋಲಾರ ನಗರಸಭೆಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಗೆ ಒಳಪಟ್ಟ ಪೌರಾಯುಕ್ತರು/ಅಧಿಕಾರಿಗಳು ನಿಧನ ಹೊಂದಿದ ನಂತರ ಅವರ ಕುಟುಂಬಕ್ಕೆ ಎಲ್ಲಾ ಸೌಲಭ್ಯಗಳನ್ನು ನೀಡಲಾಗಿದೆಯೇ; (ವಿವರಗಳನ್ನು ನೀಡುವುದು)

(ಈ) ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು;

(ಉ) ಕೋಲಾರ ನಗರ ಸಭೆಯಲ್ಲಿ ಈ ಹಿಂದೆ ನಿಯೋಜನೆ ಮೇರೆಗೆ ಪೌರಾಯುಕ್ತರಾಗಿ/ನೌಕರರಾಗಿ ಕಾರ್ಯನಿರ್ವಹಿಸಿದವರು ನಿಧನ ಹೊಂದಿದ್ದಲ್ಲಿ, ಅವರ ಕುಟುಂಬದವರಿಗೆ ಆರ್ಥಿಕ ಸೌಲಭ್ಯ ಬಿಡುಗಡೆ ಮಾಡುವ ಸಲುವಾಗಿ ಕೋಲಾರ ನಗರ ಸಭೆಯಿಂದ ಅವರ ಮಾತೃ ಇಲಾಖೆಗೆ ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿದೆಯೇ; ಇದ್ದಲ್ಲಿ, ವಿವರಗಳನ್ನು ಒದಗಿಸುವುದು;

(ಊ) ಇಲ್ಲದಿದ್ದಲ್ಲಿ, ಸದರಿ ವಿಳಂಬಕ್ಕೆ ಕಾರಣಗಳೇನು? (ವಿವರಗಳನ್ನು ನೀಡುವುದು)

## ಪೌರ ಕಾರ್ಮಿಕರಿಗೆ ಸೇವಾ ಭದ್ರತೆ ಹಾಗೂ ವಸತಿ ಒದಗಿಸುವ ಬಗ್ಗೆ.

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೪೧ (೧೯೫೭) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ನಗರ ಮತ್ತು ಪಟ್ಟಣಗಳನ್ನು ಸ್ವಚ್ಛವಾಗಿಡಲು ಶ್ರಮಿಸುತ್ತಿರುವ ಪೌರ ಕಾರ್ಮಿಕರ ಸೇವಾ ಭದ್ರತೆ, ವೇತನ ಹಾಗೂ ವಸತಿ ಸೌಲಭ್ಯ ಒದಗಿಸುವ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

## ಸಣ್ಣ ಕೈಗಾರಿಕೆ ಇಲಾಖೆಯ ಅಧೀನದ ನಿಗಮದ/ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೬೪೨ (೧೯೫೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕೆಗಳ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮ/ಮಂಡಳಿಗಳು ಎಷ್ಟು; ಸದರಿ ನಿಗಮ/ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ, ಖಾಯಂ ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?

## "ಜಿಲ್ಲಾ ಸಹಕಾರಿ ಬ್ಯಾಂಕ್" ಸ್ಥಾಪನೆ ಬಗ್ಗೆ

**ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೪೩ (೧೯೭೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿಲ್ಲೆಗೊಂದು "ಜಿಲ್ಲಾ ಸಹಕಾರಿ ಬ್ಯಾಂಕ್" ಸ್ಥಾಪಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ ಇದನ್ನು ಎಂದಿನಿಂದ ಅನುಷ್ಠಾನಗೊಳಿಸಲಾಗುವುದು;

(ಇ) ಚಿಕ್ಕಬಳ್ಳಾಪುರ ಜಿಲ್ಲೆಗೆ "ಡಿ.ಸಿ.ಸಿ ಬ್ಯಾಂಕ್" ಅನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಈ ನಿಟ್ಟಿನಲ್ಲಿ ಆಗಿರುವ ಪ್ರಗತಿ ಏನು?

## ಮೆ: ವಿಸ್ಟ್ರಾನ್ ಕಂಪನಿ ಸ್ಥಾಪನೆ ಬಗ್ಗೆ

**ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೪೪ (೧೯೭೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರದಲ್ಲಿರುವ M/S. WISTRON INFOCOM MANUFACTURING(INDIA) Pvt. Ltd. ಎಂದಿನಿಂದ ಪ್ರಾರಂಭಗೊಂಡಿತ್ತು; ಈ ಕಂಪನಿಯಲ್ಲಿ ಹೂಡಿರುವ ಬಂಡವಾಳದ ಮೊತ್ತ ಎಷ್ಟು; ಕೆಲಸ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು;

(ಆ) ಈ ಕಂಪನಿಯು ಉತ್ಪಾದಿಸುವ ಉತ್ಪನ್ನಗಳು ಯಾವುವು;

(ಇ) ಸದರಿ ಕಂಪನಿಯಲ್ಲಿ ಗೊಂದಲ ಸೃಷ್ಟಿಯಾಗಿ, ಗಲಾಟೆಗಳಾಗಿ "ಲಾಕ್‌ಡೌನ್" ಮಾಡಲು ಕಾರಣಗಳೇನು; ಇದರ ಹಿಂದೆ ಇರುವ ಶಕ್ತಿಗಳಾವುವು; ಇದರಿಂದಾಗಿ ಆಗಿರುವ ನಷ್ಟ ಎಷ್ಟು;

(ಈ) ಈ ಗಲಭೆ, ಗೊಂದಲದ ಬಗ್ಗೆ ಸತ್ಯಾಸತ್ಯತೆ ತಿಳಿಯಲು ಸರ್ಕಾರ ತನಿಖೆ ಪ್ರಾರಂಭಿಸಿದೆಯೇ ? (ತನಿಖೆಯ ವಿವರಗಳನ್ನು ನೀಡುವುದು)

## ಸಹಕಾರಿ ಸಂಘಗಳ ಬಗ್ಗೆ

**ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೪೫ (೧೯೭೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ಸಹಕಾರಿ ಸಂಘಗಳು/ಸಂಸ್ಥೆಗಳು ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಬೆಂಗಳೂರಿನಲ್ಲಿರುವ "ಹೌಸ್ ಬಿಲ್ಡಿಂಗ್ ಕೋ–ಆಪರೇಟಿವ್ ಸೊಸೈಟಿ" ಗಳ ಸಂಖ್ಯೆ ಎಷ್ಟು; (ಸೊಸೈಟಿವಾರು ಪಟ್ಟಿಯನ್ನು ನೀಡುವುದು)

(ಇ) ಮೇಲ್ಕಂಡ ಹೌಸ್ ಬಿಲ್ಡಿಂಗ್ ಸೊಸೈಟಿಯಲ್ಲಿ ಅವ್ಯವಹಾರ ನಡೆಸಿ ಕಪ್ಪು ಪಟ್ಟಿಗೆ ಸೇರಿಸಿರುವ ಸೊಸೈಟಿಗಳ ಸಂಖ್ಯೆ ಎಷ್ಟು? (ಅಂತಹ ಸೊಸೈಟಿ ಮಾಡಿರುವ ಅವ್ಯವಹಾರಗಳ ವಿವರಗಳನ್ನು ನೀಡುವುದು)

## ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೬೪೬ (೧೮೭೬) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಸಕ್ಕರೆ ಕಾರ್ಖಾನೆ ಮಾಲೀಕರು ರೈತರಿಗೆ ನೀಡಬೇಕಾಗಿರುವ ಬಾಕಿ ಹಣದ ಮೊತ್ತವೆಷ್ಟು;

(ಇ) ಈ ಬಾಕಿ ಹಣವನ್ನು ಇದುವರೆವಿಗೂ ಬಟವಾಡೆ ಮಾಡದಿರಲು ಕಾರಣಗಳೇನು?

## ಬ್ರಹ್ಮಾವರ ಸಕ್ಕರೆ ಕಾರ್ಖಾನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೭ (೧೮೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬ್ರಹ್ಮಾವರ ಸಕ್ಕರೆ ಕಾರ್ಖಾನೆಯು ಸ್ಥಗಿತಗೊಳ್ಳುವ ಮೊದಲು ಮತ್ತು ಸ್ಥಗಿತಗೊಂಡ ನಂತರ ಪಡೆದ ಸಾಲದ ಮೊತ್ತವೆಷ್ಟು ;

ಯಾವ ಯಾವ ಮೂಲಗಳಿಂದ ಮತ್ತು ಯಾವಾಗ ಸಾಲವನ್ನು ಪಡೆಯಲಾಗಿದೆ ; ಯಾವ ಕಾರಣಕ್ಕಾಗಿ ಸಾಲವನ್ನು ಪಡೆಯಲಾಗಿದೆ ; ಈಗ ಅವುಗಳ ಅಸಲು ಮತ್ತು ಬಡ್ಡಿಯ ಒಟ್ಟು ಮೊತ್ತವೆಷ್ಟು ; (ಸಾಲದ ಮೊತ್ತ, ವರ್ಷ, ಸಂಸ್ಥೆ ಮತ್ತು ಸಾಲದ ಉದ್ದೇಶವಾರು ಮಾಹಿತಿಯನ್ನು ನೀಡುವುದು )

(ಆ) ಬ್ರಹ್ಮಾವರ ಸಕ್ಕರೆ ಕಾರ್ಖಾನೆಯು ಸ್ಥಗಿತಗೊಳ್ಳುವ ಮೊದಲು ಮತ್ತು ಸ್ಥಗಿತಗೊಂಡ ನಂತರ ಸರ್ಕಾರದ ವಿವಿಧ ಇಲಾಖೆಗಳಿಗೆ ಪಾವತಿಸಲು ಬಾಕಿಯಿರುವ ಮೊತ್ತವೆಷ್ಟು ; ಅವುಗಳಲ್ಲಿ ಅಸಲು ಮತ್ತು ಬಡ್ಡಿ ಮೊತ್ತವೆಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಬ್ರಹ್ಮಾವರ ಸಕ್ಕರೆ ಕಾರ್ಖಾನೆಯು ಸ್ಥಗಿತಗೊಳ್ಳುವ ಮೊದಲು ಮತ್ತು ಸ್ಥಗಿತಗೊಂಡ ನಂತರ ರೈತರಿಗೆ ಪಾವತಿಸಲು ಬಾಕಿಯಿರುವ ಮೊತ್ತವೆಷ್ಟು ;

(ಈ) ಕಾರ್ಖಾನೆಯ ಪುನಶ್ಚೇತನದ ದೃಷ್ಟಿಯಿಂದ ಈ ಸಾಲವನ್ನು ಮನ್ನಾ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ; ಈ ಕಾರ್ಖಾನೆಯ ಪುನಶ್ಚೇತನದ ಬಗ್ಗೆ ಸರ್ಕಾರದ ಕ್ರಮವೇನು?

## ಪುರಸಭೆ ವ್ಯಾಪ್ತಿಯ ಯುಜಿಡಿ ಕಾಮಗಾರಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೪೮ (೧೮೯೬) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಸ್ಥಳೀಯ ಸಂಸ್ಥೆಗಳಲ್ಲಿ ಯುಜಿಡಿ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ ; ಅವುಗಳ ಅಂದಾಜು ಮೊತ್ತವೆಷ್ಟು ; (ಸ್ಥಳೀಯ ಸಂಸ್ಥೆವಾರು ಮಾಹಿತಿಯನ್ನು ಒದಗಿಸುವುದು)

(ಆ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆಗೆ ಯುಜಿಡಿ ಕಾಮಗಾರಿಯ ಡಿಪಿಆರ್ ಮತ್ತು ನಕ್ಷೆಯನ್ನು ತಯಾರಿಸಲಾಗಿದೆಯೇ; (ಪ್ರತಿಯನ್ನು ಒದಗಿಸುವುದು ) ಈ ಯೋಜನೆಯ ಅಂದಾಜು ವೆಚ್ಚವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; ಮೂಲ ಯೋಜನೆಗೆ ತಿದ್ದುಪಡಿಯನ್ನು ಮಾಡಲಾಗಿದೆಯೇ ; ಹೌದಾದಲ್ಲಿ, ಯಾವ ಕಾರಣಕ್ಕೆ ತಿದ್ದುಪಡಿ ತರಲಾಗಿದೆ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು )

(ಇ) ಈ ಯುಜಿಡಿ ಕಾಮಗಾರಿಯ ಟೆಂಡರ್ ಅವಧಿ ಯಾವುದು ; ಟೆಂಡರ್ ಪಡೆದ ಗುತ್ತಿಗೆದಾರರ ಹೆಸರು ಮತ್ತು ವಿಳಾಸ ಯಾವುದು; ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು;

(ಈ) ಈ ಕಾಮಗಾರಿಗಾಗಿ ಕಾಂಕ್ರೀಟ್ ರಸ್ತೆಗಳ ಮಧ್ಯಭಾಗವನ್ನು ಕತ್ತರಿಸಿ ಕಾಮಗಾರಿ ನಿರ್ವಹಿಸುತ್ತಿದ್ದು, ನಂತರ ಅವುಗಳನ್ನು ಮರು ಕಾಂಕ್ರೀಟ್ ಮಾಡದೇ ಇರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾಧ್ಯಮದಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿಯನ್ನು ಶೀಘ್ರವಾಗಿ ಮುಕ್ತಾಯಗೊಳಿಸುವ ಬಗ್ಗೆ ಕ್ರಮವೇನು?

## ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೯ (೧೮೯೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಂಜೂರಾದ ಇಂದಿರಾ ಕ್ಯಾಂಟೀನ್‌ಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಇಂದಿರಾ

ಕ್ಯಾಂಟೀನ್‌ಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಆಹಾರದ ಗುಣಮಟ್ಟ ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ; (ಸುತ್ತೋಲೆಯ ಪ್ರತಿ ಒದಗಿಸುವುದು )

(ಆ) ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಯ ಜವಾಬ್ದಾರಿಯನ್ನು ಯಾವ ಸಂಸ್ಥೆಯಿಂದ ನಿರ್ವಹಿಸಲಾಗುತ್ತಿದೆ ; ನಿರ್ವಹಣೆಗೆ ಮೀಸಲಿಟ್ಟ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು )

(ಇ) ಉಡುಪಿ ಜಿಲ್ಲೆಯಲ್ಲಿ ಎಷ್ಟು ಇಂದಿರಾ ಕ್ಯಾಂಟೀನ್‌ಗಳು ಕಾರ್ಯನಿರ್ವಹಿಸುತ್ತಿವೆ ; ಇವುಗಳ ಆಹಾರ ತಯಾರಿಕೆಗಾಗಿ ಟೆಂಡರ್ ಪಡೆದ ಗುತ್ತಿಗೆದಾರರ ಹೆಸರು ಮತ್ತು ವಿಳಾಸ ನೀಡುವುದು;

(ಈ) ಇಂದಿರಾ ಕ್ಯಾಂಟೀನ್‌ಗಳಲ್ಲಿ ಟೀ, ಹಾಲು, ಕಾಫಿ ಪಾನೀಯಗಳನ್ನು ಪೂರೈಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಹಾಲು ಉತ್ಪಾದಕ ಸಂಘಗಳಿಂದ ಇಂದಿರಾ ಕ್ಯಾಂಟೀನ್‌ಗಳಲ್ಲಿ ಕಾಫಿ, ಟೀ ಔಟ್‌ಲೆಟ್ ಸ್ಥಾಪಿಸುವ ಉದ್ದೇಶವಿದೆಯೇ ?

## ಕುಂದಾಪುರ ಪುರಸಭೆಗೆ ಕೆ.ಎಸ್.ಡಬ್ಲ್ಯೂ.ಎಸ್.ನಲ್ಲಿ ಕುಡಿಯುವ ನೀರು ಪೂರೈಕೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೫೦ (೧೮೯೫) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆಗೆ ಕೆ.ಎಸ್.ಡಬ್ಲ್ಯೂ.ಎಸ್. ನಲ್ಲಿ ೨೪/೭ ಕುಡಿಯುವ ನೀರು ಪೂರೈಸುವ ಯೋಜನೆಯ ಡಿಪಿಆರ್ ಮತ್ತು ನಕ್ಷೆಯನ್ನು ತಯಾರಿಸಲಾಗಿದೆಯೇ; (ಪ್ರತಿಯನ್ನು ಒದಗಿಸುವುದು ) ಈ ಯೋಜನೆಯ ಅಂದಾಜು

ವೆಚ್ಚವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು )

(ಆ) ಈ ಕಾಮಗಾರಿಯ ಟೆಂಡರ್ ಅವಧಿ ಎಷ್ಟು ; ಟೆಂಡರ್ ಪಡೆದ ಗುತ್ತಿಗೆದಾರರ ಹೆಸರು ಮತ್ತು ವಿಳಾಸ ಯಾವುದು ; ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು;

(ಇ) ಈ ಕಾಮಗಾರಿಗಾಗಿ ಕಾಂಕ್ರೀಟ್ ರಸ್ತೆಗಳ ಮಧ್ಯಭಾಗವನ್ನು ಕತ್ತರಿಸಿ ಕಾಮಗಾರಿ ನಿರ್ವಹಿಸಿದ್ದು ನಂತರ ಅವುಗಳನ್ನು ಮರು ಕಾಂಕ್ರೀಟ್ ಮಾಡದಿರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾಧ್ಯಮದಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿಯನ್ನು ಶೀಘ್ರವಾಗಿ ಮುಕ್ತಾಯಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

## ಸಕ್ಕರೆ ಕಾರ್ಖಾನೆಗಳ ಮಿನಿಮಮ್ ಸೆಲ್ಲಿಂಗ್ ಪ್ರೈಸ್ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ ( ನಾಮನಿರ್ದೇಶನ ) :–**

೧೬೫೧ (೧೯೦೮) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳಿಗೆ ಮಿನಿಮಮ್ ಸೆಲ್ಲಿಂಗ್ ಪ್ರೈಸ್ ಎಷ್ಟು;

(ಆ) ಹಲವು ಖಾಸಗಿ ಸಕ್ಕರೆ ಕಾರ್ಖಾನೆಗಳು ಎಂ.ಎಸ್.ಪಿ ಗಿಂತ ಕಡಿಮೆ ದರದಲ್ಲಿ ಸಕ್ಕರೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮವೇನು?

## ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ ( ನಾಮನಿರ್ದೇಶನ ) :–**

೧೬೫೨ (೧೯೦೭) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳ ವಿವರ ಒದಗಿಸುವುದು;

(ಆ) ಕಳೆದ ಎರಡು ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ನೀಡಿರುವ ಅನುದಾನ ಎಷ್ಟು;

(ಇ) ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ? (ವಿವರ ನೀಡುವುದು)

## ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ದಾರರಿಗೆ ನೀಡುತ್ತಿರುವ ಆಹಾರ ಮತ್ತು ಇತರೆ ವಸ್ತುಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ) :–**

೧೬೫೩ (೧೯೦೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಪಿ.ಎಲ್ ಹಾಗೂ ಬಿ.ಪಿ.ಎಲ್ ಕಾರ್ಡ್‌ದಾರರಿಗೆ ನೀಡುತ್ತಿರುವ ಆಹಾರ ಮತ್ತು ಇತರೆ ಸಾಮಾಗ್ರಿಗಳು ಯಾವುವು;

(ಆ) ಒನ್ ನೇಷನ್ ಒನ್ ಕಾರ್ಡ್ ಪದ್ಧತಿಯನ್ನು ಆರಂಭಿಸಲಾಗಿದೆಯೇ; ಇಲ್ಲವಾಗಿದ್ದಲ್ಲಿ, ಎಂದು ಆರಂಭಿಸಲಾಗುವುದು?

## ಸುಗರ್ ಸೆಸ್‌ನಿಂದ ಅಭಿವೃದ್ಧಿಪಡಿಸಿರುವ ರಸ್ತೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ):–**

೧೬೫೪ (೧೪೦೭) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಯಾವ ಯಾವ ಸಕ್ಕರೆ ಕಾರ್ಖಾನೆಗಳಿಂದ ಎಷ್ಟು ಸುಗರ್ ಸೆಸ್‌ನ್ನು ಪಡೆಯಲಾಗಿದೆ; (ವಿವರ ಒದಗಿಸುವುದು)

(ಆ) ಸುಗರ್ ಸೆಸ್‌ನಿಂದ ಅಭಿವೃದ್ಧಿಪಡಿಸಿರುವ ರಸ್ತೆಗಳಾವುವು? (ವಿವರ ಒದಗಿಸುವುದು)

## ಸ್ವಚ್ಛ ಭಾರತ ಅಭಿಯಾನದ ಅಡಿಯಲ್ಲಿ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೫೫ (೧೯೫೩) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ ಮತ್ತು ೨೦೨೧–೨೨ರ ಸಾಲಿನಲ್ಲಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ವಚ್ಛ ಭಾರತ್ ಯೋಜನೆಯಡಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು;

(ಆ) ಬಿಡುಗಡೆಯಾದಂತಹ ಅನುದಾನದಲ್ಲಿ ವೆಚ್ಚ ಮಾಡಲಾದ ಅನುದಾನದ ಪ್ರಮಾಣ ಎಷ್ಟು;

(ಇ) ಬಿಡುಗಡೆಯಾಗಿರುವಂತಹ ಅನುದಾನದಲ್ಲಿ ಕೈಗೊಂಡಿರುವಂತಹ ಕಾಮಗಾರಿಗಳ ಸಂಖ್ಯೆ ಎಷ್ಟು;

(ಈ) ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ಯೋಜನೆಯ ಅನುಷ್ಠಾನಕ್ಕೆ ವಿಳಂಬ ಮಾಡಿದಂತಹ ಹಾಗೂ ವಿಫಲರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರೈತರು ಸಹಕಾರ–ಸಂಘ ಸಂಸ್ಥೆಗಳಿಂದ ಪಡೆದ ಸಾಲವನ್ನು ಸರ್ಕಾರ ಮನ್ನಾ ಮಾಡುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೬ (೧೯೫೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರು ಸಹಕಾರ ಸಂಘಗಳಿಂದ ಪಡೆದ ಸಾಲವನ್ನು ರಾಜ್ಯ ಸರ್ಕಾರ ಇತ್ತೀಚೆಗೆ ಮನ್ನಾ ಮಾಡಿದೆಯೇ;

(ಆ) ರೈತರ ಸಾಲ ಮನ್ನಾ ಮಾಡಲು ಇರುವ ಯೋಜನೆಯ ಮಾನದಂಡಗಳೇನು;

(ಇ) ಯಾವ ಯಾವ ಸಹಕಾರಿ ಸಂಘ ಹಾಗೂ ಬ್ಯಾಂಕ್‌ಗಳಿಂದ ಪಡೆದ ಸಾಲವನ್ನು ಮನ್ನಾ ಮಾಡಲಾಗಿದೆ;

(ಈ) ಸದರಿ ಯೋಜನೆಯ ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು; ಹಾಗೂ ಸಾಲ ಮನ್ನಾ ಮಾಡಲಾಗಿರುವ ಮೊತ್ತ ಎಷ್ಟು?

## ಮಹಾನಗರ ಪಾಲಿಕೆಗಳಲ್ಲಿ ಕಸದ ರಾಶಿ ಬಿದ್ದು ವಿಷವಾಗುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫೭ (೧೯೫೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾನಗರ ಪಾಲಿಕೆಗಳಲ್ಲಿ ಕಸದ ರಾಶಿ ಬಿದ್ದಿದ್ದು, ವಿಷವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರತಿ ದಿನ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯ ಎಷ್ಟು; ಪ್ರತಿ ನಿತ್ಯ ಸಂಸ್ಕರಣೆಯಾಗುವ ತ್ಯಾಜ್ಯವೆಷ್ಟು;

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿತ್ತಿರುವ ಘನ ತ್ಯಾಜ್ಯ ನಿರ್ವಹಣಾ ಘಟಕಗಳ ಸಂಖ್ಯೆ ಎಷ್ಟು; ಶಿವಮೊಗ್ಗ ನಗರದಲ್ಲಿ ಪ್ರತಿದಿನ ಉತ್ಪಾದನೆಯಾಗುವ ತ್ಯಾಜ್ಯವೆಷ್ಟು; ರಾಜ್ಯದ ಮಹಾನಗರ ಪಾಲಿಕೆಯ ಡಂಪಿಂಗ್ ಯಾರ್ಡ್‌ಗಳಲ್ಲಿ ಕಸದ ರಾಶಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅವುಗಳನ್ನು ಸಂಸ್ಕರಣೆ ಮಾಡಲು ತೆಗೆದುಕೊಂಡ ಕ್ರಮಗಳೇನು;

(ಈ) ನಗರ ಪಾಲಿಕೆಗಳಿಂದ ಘನ ತ್ಯಾಜ್ಯ ಸಂಸ್ಕರಣೆ ಮಾಡಲು ಸರ್ಕಾರಕ್ಕೆ ಅನುದಾನಕ್ಕಾಗಿ ಪ್ರಸ್ತಾವನೆಗಳು ಬಂದಿರುತ್ತವೆಯೇ; ತೆಗೆದುಕೊಂಡ ಕ್ರಮವೇನು?

## ಅನುದಾನ ಬಿಡುಗಡೆ ಮಾಡುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೫೮ (೧೯೨೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ, ಇಲಾಖೆಯ ವಿವಿದ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಬಿಡುಗಡೆ ಮಾಡಿರುವ ಒಟ್ಟು ಅನುದಾನವೆಷ್ಟು; (ಕ್ಷೇತ್ರವಾರು ಮತ್ತು ಲೆಕ್ಕ ಶೀರ್ಷಿಕೆವಾರು ಪೂರ್ಣ ಮಾಹಿತಿ ನೀಡುವುದು )

(ಆ) ಬಿಡುಗಡೆಯಾದ ಅನುದಾನದಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು; ಉಳಿಕೆ ಅನುದಾನವೆಷ್ಟು; ತಡೆಹಿಡಿದಿರುವ ಅನುದಾನವೆಷ್ಟು; (ವಿವರ ಒದಗಿಸುವುದು )

(ಇ) ತಡೆಹಿಡಿದಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ತಡೆಹಿಡಿಯಲಾದ ಅನುದಾನವನ್ನು ಬಿಡುಗಡೆ ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)

## ಹೊರ ಗುತ್ತಿಗೆ ಡಾಟಾ ಎಂಟ್ರಿ ಆಪರೇಟರ್‌ಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೫೯ (೧೯೨೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦-೧೧ ನೇ ಸಾಲಿನಿಂದ ರಾಜ್ಯದ ಆಹಾರ ಇಲಾಖೆಯಲ್ಲಿ ಇಲ್ಲಿಯವರೆಗೆ ಹೊರ ಗುತ್ತಿಗೆ ಆಧಾರದ ಮೇಲೆ ತಾಲ್ಲೂಕು ಕಛೇರಿಯಲ್ಲಿ ಹಾಗೂ ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಡಾಟಾ ಎಂಟ್ರಿ ಆಪರೇಟರ್‌ಗಳು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು )

(ಇ) ೨೦೧೦-೧೧ ರಿಂದ ಇಲ್ಲಿಯವರೆಗೆ ಸದರಿ ತಾಲ್ಲೂಕು ಕಛೇರಿಯಲ್ಲಿ ಹಾಗೂ ಅನೌಪಚಾರಿಕ ಪಡಿತರ ಪ್ರದೇಶದ ಕಛೇರಿಯಲ್ಲಿ ಯಾವ ವರ್ಷದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಹಾಗೂ ಅವರ ಆದೇಶವನ್ನು ಯಾವ ವರ್ಷದವರೆಗೆ ಮುಂದುವರಿಸಲಾಗಿದೆ; (ನವೀಕರಿಸಿದ್ದಲ್ಲಿ ಆದೇಶದ ಪ್ರತಿಗಳು ಒದಗಿಸುವುದು )

(ಈ) ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನವರೆಗೆ ತಾಲ್ಲೂಕು ಕಛೇರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸದರಿ ಡಾಟಾ ಎಂಟ್ರಿ ಆಪರೇಟರ್‌ಗಳ ಸೇವೆಯನ್ನು ಮುಂದುವರೆಸದಿರುವ

ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ವರ್ಷದಿಂದ ಅವರ ಆದೇಶವನ್ನು ಯಾವ ಕಾಲಮಿತಿಯೊಳಗೆ ಮುಂದುವರಿಸಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೬೦ (೧೯೬೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳಿಗೆ ಅನುಮತಿ ನೀಡಲು ಮತ್ತು ಲೈಸೆನ್ಸ್ ನವೀಕರಣ ಮಾಡಿಕೊಳ್ಳಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು; (ಮಾಹಿತಿ ನೀಡುವುದು)

(ಇ) ಈ ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳು ಸರ್ಕಾರದ ಮಾನದಂಡಗಳಂತೆ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಮೇಲ್ವಿಚಾರಣೆ ನಡೆಸುವರು ಯಾರು; ಈ ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳನ್ನು ಕಾಲ ಕಾಲಕ್ಕೆ ತಪಾಸಣೆ ಮಾಡಿರುವ ತಪಾಸಣಾ ವರದಿಗಳೇನು; (ವಿವರ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಜಿಲ್ಲೆಯಲ್ಲಿರುವ ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳಲ್ಲಿ ನಡೆದಿರುವ ಅವಘಡಗಳ ಬಗ್ಗೆ ಮಾಹಿತಿ ಇದೆಯೇ; ಈ ಕಲ್ಲು ಕ್ವಾರಿ ಮತ್ತು ಕ್ರಷರ್‌ಗಳ ವಿರುದ್ಧ ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕರಿಂದ ಸ್ವೀಕೃತವಾಗಿರುವ ದೂರು ಅರ್ಜಿಗಳೆಷ್ಟು; ಈ ದೂರು ಅರ್ಜಿಗಳಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ತಾಲ್ಲೂಕುವಾರು ಮತ್ತು ಕ್ವಾರಿವಾರು ಮಾಹಿತಿಗಳನ್ನು ನೀಡುವುದು)

## ರಾಜ್ಯದಲ್ಲಿರುವ ಮರಳು ನಿಕ್ಷೇಪಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೬೧ (೧೯೭೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಗುರುತಿಸಲಾಗಿದೆ; ಇವುಗಳಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಹರಾಜು ಮುಖಾಂತರ ವಿಲೇವಾರಿ ಮಾಡಲಾಗಿದೆ; ಇವುಗಳನ್ನು ಹರಾಜಿನಲ್ಲಿ ಪಡೆದ ಗುತ್ತಿಗೆದಾರರು ಯಾರು; (ನಿಕ್ಷೇಪವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಅಕ್ರಮ ಮರಳು ದಾಸ್ತಾನು ಪ್ರಕರಣಗಳು ಬೆಳಕಿಗೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ಮರಳನ್ನು ಅಕ್ರಮವಾಗಿ ಸಂಗ್ರಹಿಸಲಾಗಿತ್ತು, ಯಾರು ಸಂಗ್ರಹಿಸಿದ್ದಾರೆ, ಇದಕ್ಕೆ ವಿಧಿಸಿರುವ ದಂಡವೆಷ್ಟು; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಅಕ್ರಮ ಮರಳು ದಾಸ್ತಾನುದಾರರ ವಿರುದ್ಧ ಮತ್ತು ಅಕ್ರಮ ಮರಳು ದಾಸ್ತಾನು ಮಾಡದಂತೆ ತಡೆಯಲು ವಿಫಲರಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಪ್ರಕರಣವಾರು ಮಾಹಿತಿ ನೀಡುವುದು)

(ಈ) ಅಕ್ರಮ ಮರಳು ದಾಸ್ತಾನು ಮಾಡುವುದನ್ನು ತಡೆಗಟ್ಟಲು ಸರ್ಕಾರವು ವಹಿಸಿರುವ ಮುಂಜಾಗ್ರತಾ ಕ್ರಮಗಳೇನು? (ವಿವರ ನೀಡುವುದು)

# KIADB ವತಿಯಿಂದ ಭೂಸ್ವಾಧೀನ ಮಾಡಿಕೊಂಡಿರುವ ಜಮೀನುಗಳ ಬಗ್ಗೆ

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೬೨ (೧೯೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪನೆ ಮಾಡುವ ಉದ್ದೇಶದಿಂದ ಯಾವ ಯಾವ ಪ್ರದೇಶಗಳಲ್ಲಿ ಎಷ್ಟೇಷ್ಟು ಜಮೀನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ಹಾಗೂ ಯಾವ ಉದ್ದೇಶಗಳಿಗೆ ಬಳಸಲಾಗಿದೆ; (ಯೋಜನೆವಾರು ಹಾಗೂ ಪ್ರಕರಣವಾರು ದಾಖಲೆಯೊಂದಿಗೆ ಮಾಹಿತಿ ನೀಡುವುದು)

(ಆ) KIADB ಭೂಸ್ವಾಧೀನ ಮಾಡಿಕೊಂಡಿರುವ ಜಮೀನುಗಳಿಗೆ ಪರಿಹಾರ ನೀಡಲಾಗಿದೆಯೇ; ಸರ್ಕಾರ ನಿಗದಿಪಡಿಸಿರುವ ಮೌಲ್ಯದಂತೆ ಪ್ರಕರಣವಾರು ಪರಿಹಾರ ನೀಡಲಾಗಿರುವುದು ಎಷ್ಟು;(ವಿವರವಾರ ಮಾಹಿತಿ ನೀಡುವುದು)

(ಇ) ಭೂಸ್ವಾಧೀನ ಮಾಡಿಕೊಳ್ಳುವ ಸಂದರ್ಭದಲ್ಲಿ KIADB ಅಧಿಕಾರಿಗಳು ಮಧ್ಯವರ್ತಿಗಳೊಂದಿಗೆ ಶಾಮೀಲಾಗಿ ರೈತರಿಂದ ಕನಿಷ್ಠ ಬೆಲೆಗೆ ಜಮೀನನ್ನು ಖರೀದಿಸಿ ನಂತರ KIADB ಗೆ ಹೆಚ್ಚಿನ ಬೆಲೆಗೆ ನಿಗದಿಪಡಿಸಿಕೊಂಡು ಅವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಭೂಸ್ವಾದೀನ ಮಾಡಿದ ನಂತರ ಯಾವ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; KTPP ನಿಯಮ ಪಾಲನೆ ಆಗಿದೆಯೇ; (ಪ್ರಕರಣವಾರು ಟೆಂಡರ್ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಉ) ಟೆಂಡರ್ ಕಾಮಗಾರಿ ನೀಡುವಾಗ ಕೆಲವು ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಅರ್ಹತೆಗಳನ್ನು ನಿಗದಿಪಡಿಸಿ ಅವ್ಯವಹಾರದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ?

## ನೆಲಮಂಗಲ ನಗರ ಸಭೆಯ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೬೩ (೧೯೫೪) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ನಗರ ಸಭೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ನೆಲಮಂಗಲ ನಗರ ಸಭೆ ವ್ಯಾಪ್ತಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು)

## ಸಹಕಾರ ಇಲಾಖೆಯಲ್ಲಿನ ಯೋಜನೆಗಳ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ):-**

೧೬೬೪ (೧೯೧೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸಹಕಾರ ಇಲಾಖೆಯಲ್ಲಿರುವ ಯೋಜನೆಗಳು ಯಾವುವು; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಇಲಾಖೆಯಡಿಯಲ್ಲಿ ಮೀಸಲಿಟ್ಟ ಅನುದಾನ, ಖರ್ಚಾದ ಅನುದಾನ ಮತ್ತು ತೆಗೆದುಕೊಂಡ ಯೋಜನೆಗಳ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಇ) ಪ್ರಸಕ್ತ ವರ್ಷದಲ್ಲಿ ಇಲಾಖೆಯಲ್ಲಿ ಯಾವುದಾದರೂ ಹೊಸ ಯೋಜನೆ ಪ್ರಾರಂಭಿಸಲು ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ಹೂಡಿಕೆಯಾಗಿರುವ ಬಂಡವಾಳ ಕುರಿತು

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ):–**

೧೬೬೫ (೧೯೧೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆಯಲ್ಲಿರುವ ಯೋಜನೆಗಳು ಯಾವುವು; (ವಿವರ ನೀಡುವುದು )

(ಆ) ಕಳೆದ ೫ ವರ್ಷಗಳಲ್ಲಿ ಇಲಾಖೆಯಡಿಯಲ್ಲಿ ಮೀಸಲಿಟ್ಟ ಅನುದಾನ, ಖರ್ಚಾದ ಅನುದಾನ ಮತ್ತು ತೆಗೆದುಕೊಂಡ ಯೋಜನೆಯ ಕಾಮಗಾರಿಗಳು ಯಾವುವು; (ವಿವರ ನೀಡುವುದು )

(ಇ) ಪ್ರಸಕ್ತ ವರ್ಷದಲ್ಲಿ ಇಲಾಖೆಯಲ್ಲಿ ಯಾವುದಾದರೂ ಹೊಸ ಯೋಜನೆ ಪ್ರಾರಂಭಿಸಲು ಸರ್ಕಾರ ಚಿಂತಿಸಿದೆಯೇ ; (ವಿವರ ನೀಡುವುದು )

(ಈ) ಕಳೆದ ೫ ವರ್ಷಗಳಲ್ಲಿ ರಾಜ್ಯಕ್ಕೆ ಎಷ್ಟು ಮೊತ್ತದ ಒಟ್ಟು ಬಂಡವಾಳ ಹೂಡಿಕೆಯಾಗಿದೆ ? (ವಾರ್ಷಿಕವಾರು ವಿವರ ನೀಡುವುದು )

## ರಾಜ್ಯದಲ್ಲಿ ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರ ಸಭೆಗಳಲ್ಲಿ ಮಂಜೂರಾದ ಹಾಗೂ ನೇಮಕಗೊಂಡ ಸಿಬ್ಬಂದಿಗಳ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೬೬೬ (೧೯೭೮) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು; (ಜಿಲ್ಲಾವಾರು ವಿಭಾಗವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ವಿವಿಧ್ ಹುದ್ದೆಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳು ಎಷ್ಟು; ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ಜಿಲ್ಲಾವಾರು ವಿಭಾಗವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ವಿವಿಧ ಹುದ್ದೆಗಳನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಕ್ರಮವಹಿಸುವುದು ?

## ಮಂಡ್ಯ ನಗರದ ಘನತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೬೬೭ (೧೯೫೮) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರ ಸಭೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುತ್ತಿರುವ ಘನ ತ್ಯಾಜ್ಯ ವಿಲೇವಾರಿ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ;

(ಆ) ಘನ ತ್ಯಾಜ್ಯ ನಿರ್ವಹಣೆಗೆ ಆಧುನಿಕ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲು ಯೋಜನೆಯನ್ನು ಸಿದ್ದಪಡಿಸಲಾಗಿದೆಯೇ; ಇದಕ್ಕಾಗಿ ಸರ್ಕಾರ ಮೀಸಲಿಟ್ಟ ಹಣವೆಷ್ಟು ;(ವಿವರ ನೀಡುವುದು)

(ಇ) ನಗರದ ಸಾರ್ವಜನಿಕ ರಸ್ತೆ,ಹಾಗೂ ಖಾಲಿ ಜಾಗಗಳಲ್ಲಿ ತ್ಯಾಜ್ಯವನ್ನು ಹಾಕುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೬೮ (೧೯೩೨) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪರವಾನಗಿ ನವೀಕರಿಸದಿರುವ ಕಾರ್ಖಾನೆಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಆಹಾರ ಮತ್ತು ನಾಗರಿಕ ಸರಬರಾಜು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೬೯ (೧೯೩೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೨ ವರ್ಷದಿಂದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಬಿ.ಪಿ.ಎಲ್

ಪಡಿತರ ಚೀಟಿ ಕೋರಿ ಸಲ್ಲಿಸಿದವರ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಪಡಿತರ ಚೀಟಿ ವಿತರಿಸಲಾಗಿದೆ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಬಯೋಮೆಟ್ರಿಕ್ ಕಡ್ಡಾಯವಾಗಿದೆಯೇ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ೦೨ ವರ್ಷದಿಂದ ಆಹಾರ ಧಾನ್ಯ ಪೂರೈಕೆಯಲ್ಲಿ ಅಕ್ರಮವೆಸಗಿರುವ ಬಗ್ಗೆ ದಾಖಲಾಗಿರುವ ಪ್ರಕರಣಗಳೆಷ್ಟು; ಪ್ರಕರಣ ದಾಖಲಾದವರ ವಿರುದ್ಧ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ವಿವರ ನೀಡುವುದು)

## MSME ಕಲ್ಲು ಗಣಿಕಾರಿಕೆಗಳಿಗೆ ಪರವಾನಗಿ ನಿರಾಕರಣೆ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೧೬೭೦ (೧೯೬೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ MSME ಕಲ್ಲು ಗಣಿಕಾರಿಕೆಗಳಿಗೆ ೨೦೨೦ ಮಾರ್ಚ್‌ನಲ್ಲಿ ತಿದ್ದುಪಡಿ ತಂದ ನಂತರ, ಹಳೆಯ ಅರ್ಜಿಗಳಿಗೆ ತಹಶೀಲ್ದಾರ್, ಅಸಿಸ್ಟೆಂಟ್ ಕಮೀಷನರ್, ಜಿಲ್ಲಾಧಿಕಾರಿಗಳು, ಅರಣ್ಯ ಇಲಾಖಾ ನಿರಾಕ್ಷೇಪಣಾ ಪ್ರಮಾಣ ಪತ್ರ ನೀಡಿ, ಟಾಸ್ಕ್‌ಫೋರ್ಸ್ ಸಮಿತಿ ಒಪ್ಪಿಗೆ ನೀಡಿದ ಮನವಿಗಳಿಗೆ ಪರವಾನಗಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ರೀತಿಯ ಎಷ್ಟು ಮನವಿಗಳು ಬಾಕಿ ಉಳಿದಿರುತ್ತವೆ; ಪರವಾನಗಿ ನೀಡದಿರಲು ಕಾರಣವೇನು; ಕಂದಾಯ ಹಾಗೂ ಖಾಸಗಿ ಭೂಮಿಗಳಲ್ಲಿ ಜಿಲ್ಲಾವಾರು ಬಾಕಿಯಿರುವ ಮನವಿಗಳೆಷ್ಟು; (ಮಾಹಿತಿ ನೀಡುವುದು)

(ಇ) ಎಲ್ಲಾ ದಾಖಲೆಗಳು ಸಮರ್ಪಕವಾಗಿದ್ದರೂ ಕೆಲವು ಅರ್ಜಿಗಳನ್ನು ಕಾನೂನುಬಾಹಿರವಾಗಿ ವಜಾ ಮಾಡಿರುವುದರಿಂದ MSME ಕೈಗಾರಿಕೆ ಕಲ್ಲು ಗಣಿ ಕ್ರಷರ್‌ಗಳ ಮಾಲೀಕರು ಬ್ಯಾಂಕ್‌ಗಳಲ್ಲಿ ಸಾಲ ಪಡೆದು, ಮರುಪಾವತಿಸಲಾಗದೆ, ಉದ್ಯೋಗಿಗಳು ಕೆಲಸವಿಲ್ಲದೆ ಜೀವನವು ದುಸ್ತರವಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಈ ನಿಟ್ಟಿನಲ್ಲಿ ಬಾಕಿಯಿರುವ ಮನವಿಗಳನ್ನು ಮರುಪರಿಶೀಲಿಸಿ, ಪರವಾನಗಿ ನೀಡುವ ಬಗ್ಗೆ ಸರ್ಕಾರ ಪರಿಹಾರ ಕ್ರಮಗಳನ್ನು ಕೈಗೊಳ್ಳುವುದೇ? (ಸಂಪೂರ್ಣ ಮಾಹಿತಿ ನೀಡುವುದು)

## ಅವೈಜ್ಞಾನಿಕ ಮತ್ತು ಕಾನೂನುಬಾಹಿರ ಅಕ್ರಮ ಗಣಿಕಾರಿಕೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :-**

೧೬೭೧ (೯೬೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಳ್ಳಾರಿ, ಚಿತ್ರದುರ್ಗ, ತುಮಕೂರು ಮುಂತಾದ ಜಿಲ್ಲೆಗಳಲ್ಲಿ ಅವೈಜ್ಞಾನಿಕವಾಗಿ ಮತ್ತು ಕಾನೂನುಬಾಹಿರವಾಗಿ ಅಕ್ರಮ ಗಣಿಗಾರಿಕೆ ನಡೆಸಿ, ಪರಿಸರ ಮತ್ತು ಭೂಮಿಗೆ ಅಗಾಧವಾದ ಧಕ್ಕೆ ಉಂಟು ಮಾಡಿರುವುದನ್ನು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಪುನರ್‌ಸ್ಥಾಪಿಸಲು ಒಂದು ಪರಿಸರ ಸಂರಕ್ಷಣಾ ನಿಧಿಯನ್ನು ಸ್ಥಾಪಿಸಿರುವುದು ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಪರಿಸರ ಸಂರಕ್ಷಣಾ ನಿಧಿಗೆ ಪ್ರಾರಂಭದಿಂದಲೂ ತಹಲ್‌ವರೆಗೆ ಸಂದಾಯವಾಗಿರುವ ಹಣವೆಷ್ಟು; (ಜಿಲ್ಲಾವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)

(ಇ) ಪರಿಸರ ಸಂರಕ್ಷಣಾ ಕಾರ್ಯವನ್ನು ಪರಿವೀಕ್ಷಿಸಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಉಸ್ತುವಾರಿ ಸಮಿತಿಯನ್ನು ರಚಿಸಲಾಗಿದೆಯೇ; (ಸಮಿತಿ ಕಾರ್ಯನಿರ್ವಹಣೆಯ ವಿವರ ನೀಡುವುದು)

(ಈ) ಬಾಧಿತ ಜಿಲ್ಲೆಗಳಲ್ಲಿ ಪರಿಸರ ಸಂರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲು ಜಿಲ್ಲಾ ಖನಿಜ ನಿಧಿ(DMF) ಮತ್ತು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಸ್ಥಾಪಿತವಾಗಿರುವ ವಿಶೇಷ ಉದ್ದೇಶಿತ ವಾಹನಗಳ (SPV) ನಿಧಿಗಳ ಅಡಿಯಲ್ಲಿ ರೂಪಿಸಿರುವ ಕಾರ್ಯಕ್ರಮಗಳು ಮತ್ತು ಯೋಜನೆಗಳನ್ನು ಒಳಗೊಂಡ ಕ್ರೀಯಾ ಯೋಜನೆಗಳು ಯಾವುವು; ಅವುಗಳ ಅನುಷ್ಠಾನ ಯಾವ ಹಂತದಲ್ಲಿವೆ; (ಭೌತಿಕ ಮತ್ತು ಆರ್ಥಿಕ ಗುರಿಗಳನ್ನೊಳಗೊಂಡಂತೆ ವಿವರ ನೀಡುವುದು)

(ಉ) ರಾಜ್ಯ ಸರ್ಕಾರ ತಯಾರಿಸಿರುವ ಪರಿಸರ ಸಂರಕ್ಷಣಾ ಕ್ರಿಯಾ ಯೋಜನೆಯನ್ನು ಕೈಗೆತ್ತಿಕೊಳ್ಳಲು ಸರ್ವೋಚ್ಚ ನ್ಯಾಯಾಲಯದ ಅನುಮತಿ ದೊರೆತಿದೆಯೇ; ಇಲ್ಲದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು (ಎಂ.ಎಸ್.ಎಂ.ಇ)

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :-**

೧೬೭೨ (೧೯೨೮) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ (ಎಂ.ಎಸ್.ಎಂ.ಇ) ಇ-ಕಾಮರ್ಸ್ ಮಾರ್ಕೆಟಿಂಗ್ ವೇದಿಕೆಯನ್ನು ಪ್ರಾರಂಭಿಸಲು ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆಯೇ ; ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು ;

(ಆ) ಎಂ.ಎಸ್.ಎಂ.ಇ., ವಲಯವನ್ನು ಹೆಚ್ಚಿಸಲು ಮತ್ತು ಉತ್ಪಾದನಾ ಕ್ಷೇತ್ರದಲ್ಲಿ ಎಂ.ಎಸ್.ಎಂ.ಇ. ಗಳ ಕೊಡುಗೆ ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಆರ್. ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೭೩ (೧೯೫೬) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳು ನಿಗದಿತ ಸಮಯದಲ್ಲಿ ರೈತರಿಗೆ ಹಣ ಪಾವತಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರೈತರಿಗೆ ಹಣ ಪಾವತಿಸುವುದನ್ನು ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳು ಯಾವುವು:

(ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಕೊಡಗು ಜಿಲ್ಲೆಯಲ್ಲಿನ ನ್ಯಾಯಬೆಲೆ ಅಂಗಡಿಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೪ (೧೯೭೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರತಿಯೊಂದು ನ್ಯಾಯಬೆಲೆ ಅಂಗಡಿಯ ಮೂಲಕ ಎಷ್ಟು ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಮಾಡಲಾಗುತ್ತಿದೆ;

(ಇ) ಕೊಡಗು ಜಿಲ್ಲೆ ಗುಡ್ಡಗಾಡು ಪ್ರದೇಶವಾಗಿದ್ದು, ಪಡಿತರ ಅಂಗಡಿಗಳಿರುವ ಸ್ಥಳಕ್ಕೂ ಫಲಾನುಭವಿ ವಾಸವಾಗಿರುವ ಸ್ಥಳಕ್ಕೂ ತುಂಬಾ ಅಂತರವಿರುವುದರಿಂದ, ಸಾರ್ವಜನಿಕರಿಗೆ ಪಡಿತರ ಪಡೆಯಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡಲಾದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೫ (೧೯೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಎಷ್ಟು ರೈತರು ಶೂನ್ಯ ಬಡ್ಡಿ ದರದಲ್ಲಿ ೩ ಲಕ್ಷದವರೆಗೆ ಸಾಲವನ್ನು ಪಡೆದುಕೊಂಡಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಎಷ್ಟು ರೈತರು ಸಾಲವನ್ನು ಪಡೆಯಲು ಅರ್ಜಿ ಸಲ್ಲಿಸಿದ್ದಾರೆ; ಅರ್ಜಿ ಸಲ್ಲಿಸಿದ ಎಷ್ಟು ರೈತರಿಗೆ ಸಾಲ ವಿತರಿಸಲಾಗಿದೆ ಹಾಗೂ ಸಾಲದ ಸೌಲಭ್ಯ ಪಡೆಯದೆ ಇರುವ ರೈತರ ಸಂಖ್ಯೆ ಎಷ್ಟು; ಇದಕ್ಕೆ ಕಾರಣಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ರೈತರ ಮಧ್ಯಮ ಅವಧಿ ಸಾಲದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೬ (೧೯೨೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ರೈತರು ತೆಗೆದುಕೊಂಡ ಮಧ್ಯಮಾವಧಿ ಸಾಲಗಳ ಬಡ್ಡಿ ಮನ್ನಾ ಮಾಡಲಾಗಿದೆಯೇ;

(ಆ) ಜಿಲ್ಲೆಯಲ್ಲಿ ಎಷ್ಟು ರೈತರ ಬಡ್ಡಿ ಮನ್ನಾ ಮಾಡಲಾಗಿದೆ ; ಇನ್ನೂ ಎಷ್ಟು ರೈತರಿಗೆ ಸಾಲ ಬಡ್ಡಿ ಮನ್ನಾ ಬಾಕಿ ಇದೆ ; (ತಾಲ್ಲೂಕುವಾರು, ರೈತವಾರು ವಿವರ ನೀಡುವುದು )

(ಇ) ರಾಜ್ಯದಲ್ಲಿ ೨ ಲಕ್ಷದ ವರೆಗೆ ರೈತರ ಸಾಲ ಮನ್ನಾ ಮಾಡಿದ್ದು, ಅದರಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಸಾಲ ಬಡ್ಡಿ ಮನ್ನಾ ಮಾಡಲಾಗಿದೆ ; ಇನ್ನೂ ಎಷ್ಟು ರೈತರಿಗೆ ಸಾಲ ಮನ್ನಾ ಮಾಡಬೇಕಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು )

## ಬೀದರ್ ಜಿಲ್ಲೆಯಲ್ಲಿ ಕೈಗಾರಿಕಾ ಸ್ಥಾಪನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೭ (೧೯೪೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲಾಗುವುದು; ಅವುಗಳ ಸ್ಥಾಪನೆಗೆ ಸ್ಥಳ ಗುರುತಿಸಲಾಗಿದೆಯೇ;

(ಆ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೃಷಿ ಆಧಾರಿತ ಕಾರ್ಖಾನೆಗಳು ಹೆಚ್ಚಾಗಿ ಸ್ಥಾಪನೆ ಆಗದಿರಲು ಕಾರಣಗಳೇನು; ಇದಕ್ಕೆ ಸರ್ಕಾರ ಉತ್ತೇಜನ ನೀಡದಿರಲು ಕಾರಣಗಳೇನು?

# ರಾಜ್ಯದಲ್ಲಿರುವ ಬಿ.ಪಿ.ಎಲ್., ಎ.ಪಿ.ಎಲ್ ಹಾಗೂ ಅಂತ್ಯೋದಯ ಪಡಿತರದಾರರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೭೮ (೧೯೪೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ರಾಜ್ಯದಲ್ಲಿರುವ ಬಿ.ಪಿ.ಎಲ್., ಎ.ಪಿ.ಎಲ್ ಹಾಗೂ ಅಂತ್ಯೋದಯ ಪಡಿತರ ಒಟ್ಟು ಸಂಖ್ಯೆ ಎಷ್ಟು; ಅಕ್ರಮ ಪಡಿತರ ತಡೆಯುವ ನಿಟ್ಟಿನಲ್ಲಿ ಕಳೆದ ೨ ವರ್ಷಗಳಿಂದ ಡಿಸೆಂಬರ್-೨೦೨೦ರ ಅಂತ್ಯಕ್ಕೆ ಎಷ್ಟು ಅಕ್ರಮ ಪಡಿತರ ಕಾರ್ಡುಗಳನ್ನು ಸರ್ಕಾರ ರದ್ದುಪಡಿಸಿದೆ; (ಕಾರ್ಡುಗಳ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ೨೦೨೦-೨೧ನೇ ಸಾಲಿನಲ್ಲಿ ಜನವರಿ-೨೦೨೧ರ ಅಂತ್ಯಕ್ಕೆ ಒಟ್ಟು ಎಷ್ಟು ಮೆಟ್ರಿಕ್ ಟನ್ ಆಹಾರ ಧಾನ್ಯದ ಅವಶ್ಯಕತೆ ಇದೆ; ರಾಜ್ಯಕ್ಕೆ ಅವಶ್ಯಕತೆಯಿರುವ ಆಹಾರಧಾನ್ಯಗಳಲ್ಲಿ ಕೇಂದ್ರ ಸರ್ಕಾರವು ರಾಜ್ಯಕ್ಕೆ ಎಷ್ಟು ಮೆಟ್ರಿಕ್ ಟನ್ ಆಹಾರ ಧಾನ್ಯ ಪೂರೈಸುತ್ತದೆ; (ಪಡಿತರ/ಆಹಾರ ಧಾನ್ಯವಾರು ಮಾಹಿತಿ ನೀಡುವುದು)

(ಇ) ಕೇಂದ್ರ ಪೂರೈಸಿರುವ ಪಡಿತರವನ್ನು ಹೊರತುಪಡಿಸಿ ರಾಜ್ಯಕ್ಕೆ ಇನ್ನು ಹೆಚ್ಚಿನ ಎಷ್ಟು ಪಡಿತರ ಅವಶ್ಯಕತೆ ಇದೆ; ಈ ಪಡಿತರವನ್ನು ಯಾವ ಯಾವ ಮೂಲಗಳಿಂದ ಯಾವ ಬೆಲೆಗೆ ಖರೀದಿಸಲಾಗುತ್ತಿದೆ; (ಪಡಿತರವಾರು ವಿವರ ನೀಡುವುದು)

(ಈ) ಕೇಂದ್ರ ಸರ್ಕಾರವು ಅಕ್ಕಿ, ಗೋಧಿ ಮತ್ತು ಸಕ್ಕರೆ ಇತರೆ ಪಡಿತರವನ್ನು ಯಾವ ಬೆಲೆಯಲ್ಲಿ ಖರೀದಿ ಮಾಡಿ ರಾಜ್ಯಕ್ಕೆ ಯಾವ ಬೆಲೆಯಲ್ಲಿ ನೀಡುತ್ತದೆ? (ಪಡಿತರವಾರು ಮಾಹಿತಿ ನೀಡುವುದು)

## ಗಣಿಗಾರಿಕೆಗಾಗಿ ಗುತ್ತಿಗೆ/ಪರವಾನಗಿಗಳ ಮಂಜೂರಾತಿ/ ನವೀಕರಣಗಳಲ್ಲಿ ವಿಳಂಭವಾಗುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭೯ (೯೪೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಪರವಾನಗಿ ಪಡೆದು ನಡೆಸಲಾಗುತ್ತಿರುವ ಗಣಿಗಾರಿಕೆಗಳ ಸಂಖ್ಯೆ ಎಷ್ಟು; ಅಕ್ರಮವಾಗಿ ನಡೆಸಲಾಗುತ್ತಿರುವ ಗಣಿಗಾರಿಕೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಅಕ್ರಮ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಗಣಿಗಾರಿಕೆಯಿಂದ ಸಂಗ್ರಹವಾದ ಮೊತ್ತವೆಷ್ಟು ;

(ಈ) ಗಣಿಗಾರಿಕೆಯಿಂದ ಬಾಧಿತ ಪ್ರದೇಶಗಳ ಅಭಿವೃದ್ಧಿಗಾಗಿ ತೆಗೆದಕೊಂಡ ಕ್ರಮಗಳೇನು ?

## ಗಣಿಗಾರಿಕೆಗಾಗಿ ಗುತ್ತಿಗೆ/ಪರವಾನಗಿಗಳ ಮಂಜೂರಾತಿ/ ನವೀಕರಣಗಳಲ್ಲಿ ವಿಳಂಭವಾಗುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೦ (೯೪೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗಣಿಗಾರಿಕೆಗಾಗಿ ಗುತ್ತಿಗೆ/ಪರವಾನಗಿಗಳ ಮಂಜೂರಾತಿ/ ನವೀಕರಣಗಳಲ್ಲಿನ ವಿಳಂಭ ನೀತಿಯಿಂದ ಅದಿರು ಗಣಿಗಾರಿಕೆ

ಮತ್ತು ಗ್ರಾನೈಟ್ ಕಲ್ಲು ಗಣಿಗಾರಿಕೆ ಉದ್ಯಮ ನಾನಾ ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಮಸ್ಯೆಗಳ ವಿವರ ನೀಡುವುದು)

(ಆ) ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಅದಿರು ಗಣಿಗಾರಿಕೆ ಹಾಗೂ ಅಲಂಕಾರಿಕ ಗ್ರಾನೈಟ್ ಕಲ್ಲು ಗಣಿಗಾರಿಕೆ (ಕಟ್ಟಡ ಕಲ್ಲುಗಳನ್ನು ಬಿಟ್ಟು) ನಡೆಸಲು ಗುತ್ತಿಗೆ/ಪರವಾನಗಿಗಳನ್ನು (ಯಾವ ವರ್ಷದಿಂದ ಯಾವ ವರ್ಷದವರಿಗೆ) ಯಾವ ಸಂಸ್ಥೆ/ವ್ಯಕ್ತಿಗಳಿಗೆ ನೀಡಲಾಗಿದೆ ; (ಜಿಲ್ಲಾವಾರು ಸಮಗ್ರ ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಸರ್ಕಾರಕ್ಕೆ ಸಂದಾಯ ಮಾಡಿದ ರಾಜಧನವೆಷ್ಟು ? (ಜಿಲ್ಲಾವಾರು, ಸಂಸ್ಥೆವಾರು, ವ್ಯಕ್ತಿವಾರು ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೧ (೧೯೪೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿರುವ ಒಟ್ಟು ಜನ ಸಂಖ್ಯೆ ಎಷ್ಟು ;

(ಆ) ಸದರಿ ನಗರಸಭೆಯಲ್ಲಿ ಪ್ರತಿದಿನ ಉತ್ಪಾದನೆಯಾಗುತ್ತಿರುವ ಘನತ್ಯಾಜ್ಯ ಎಷ್ಟು ; ಸದರಿ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುತ್ತಿದೆಯೇ ;

(ಇ) ಮಾಡುತ್ತಿದ್ದಲ್ಲಿ, ಯಾವ ಆಧುನಿಕ ತಂತ್ರಜ್ಞಾನವನ್ನು ಬಳಸಿ ಘನತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದೆ ?

## ಜವಳಿ ನೇಕಾರರಿಗೆ ಮನೆ ನಿರ್ಮಾಣ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೨ (೧೯೪೭) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನಲ್ಲಿ ನೇಕಾರರಿಗೆ ಮನೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಈ ಸಂಬಂಧ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆಯೇ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ನೇಕಾರರಿಗೆ ನಿರ್ಮಾಣ ಮಾಡಿಕೊಡಲಾಗಿರುವ ಮನೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಅನ್ನಭಾಗ್ಯ ಯೋಜನೆಯಡಿ ನಡೆಯುತ್ತಿರುವ ಅವ್ಯವಹಾರದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೩ (೧೯೧೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಬಡವರ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರ ವಿತರಿಸುತ್ತಿರುವ ಅಪಾರ ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್ ಗಟ್ಟಲೆ ಉಳಿಕೆಯಾಗುತ್ತಿದ್ದು, ಕೆಲವು ಅಧಿಕಾರಿಗಳು ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ಐದು ವರ್ಷಗಳಿಂದ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ಬಂದಿರುವ ಅಕ್ಕಿಯ ಪ್ರಮಾಣ ಹಾಗೂ ನ್ಯಾಯ ಬೆಲೆ ಅಂಗಡಿಗೆ ಅಕ್ಕಿ ಪೂರೈಸಿರುವ ಪ್ರಮಾಣ ಎಷ್ಟು ; (ಜಿಲ್ಲೆಯ ವಿವಿಧ ತಾಲ್ಲೂಕುಗಳಿಗೆ ಅನ್ನ ಭಾಗ್ಯ ಯೋಜನೆಯಡಿ ಬಂದಿರುವ ಅಕ್ಕಿ ನ್ಯಾಯ ಬೆಲೆ ಅಂಗಡಿಯಿಂದ ಪೂರೈಸಿರುವ ಫಲಾನುಭವಿಗಳ ವಿವರದೊಂದಿಗೆ ಸವಿಸ್ತಾರ ವರದಿ ನೀಡುವುದು)

(ಇ) ಈ ಕ್ರಮುವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಈ) ಸುಳ್ಳು ಲೆಕ್ಕ ತೋರಿಸಿ ಕಾಳ ಸಂತೆಯಲ್ಲಿ ಅನ್ನ ಭಾಗ್ಯದ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿಗಳ, ಅಂಗಡಿ ಮಾಲೀಕರ ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ? (ಸ್ಪಷ್ಟ ವಿವರ ನೀಡುವುದು)

## ಲೇಔಟುಗಳ ಮಾಹಿತಿ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೪ (೧೯೧೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಎಷ್ಟು ಲೇಔಟ್‌ಗಳಿಗೆ ಅನುಮತಿ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಿಗಧಿತ ಅವಧಿಯಲ್ಲಿ ಲೇಔಟ್ ಅಭಿವೃದ್ಧಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಭಿವೃದ್ಧಿ ಮಾಡಿರುವ/ ಮಾಡದಿರುವ ಲೇಔಟ್‌ಗಳ ಸಂಖ್ಯೆ ಎಷ್ಟು; ಮತ್ತು ಅಭಿವೃದ್ಧಿ ಮಾಡದಿರುವ ಲೇಔಟ್‌ಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಾರವಾರ ಜಿಲ್ಲೆಯಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಲೇಔಟ್ ಸಂಖ್ಯೆ ಎಷ್ಟು ; ಮತ್ತು ಸದರಿಯವರ ವಿರುದ್ಧ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಅನಿಲ ಸಂಪರ್ಕ ಪಡೆದಿರುವ ಫಲಾನುಭವಿಗಳ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೫ (೧೯೧೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಖೆಯಿಂದ ಅಡುಗೆ ಅನಿಲ ಸಂಪರ್ಕವನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಂಪರ್ಕವನ್ನು ಹಂಚಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಾಕಿಯಿರುವ ಅರ್ಜಿಗಳನ್ನು ಎಷ್ಟು ದಿನಗಳಲ್ಲಿ ವಿಲೇವಾರಿ ಮಾಡಲಾಗುವುದು ; ಅಡುಗೆ ಅನಿಲ ಸಂಪರ್ಕವನ್ನು ನೀಡಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ; ಈ ಅಡುಗೆ ಅನಿಲ ಸಂಪರ್ಕವನ್ನು ಪಡೆಯಲು ಬಾಕಿ ಇರುವ ಪ್ರಕರಣಗಳೆಷ್ಟು; ಬಾಕಿಯಿದ್ದಲ್ಲಿ ವಿತರಿಸಲಾಗುವುದು ಯಾವಾಗ ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮೀಣ ತಾಂಡ ಪ್ರದೇಶಗಳಲ್ಲಿ ನ್ಯಾಯ ಬೆಲೆ ಅಂಗಡಿಗಳನ್ನು ತೆರೆಯುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೬ (೧೯೧೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಜನ ವಸತಿ ಪ್ರದೇಶದಿಂದ ದೂರ ಇರುವ ಗ್ರಾಮೀಣ ತಾಂಡ ಪ್ರದೇಶಗಳಲ್ಲಿ ನ್ಯಾಯ ಬೆಲೆ ಅಂಗಡಿಗಳನ್ನು ತೆರೆಯಲು ಉದ್ದೇಶಿಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ತಾಂಡ ಪ್ರದೇಶಗಳನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ತಾಂಡ ಪ್ರದೇಶಗಳಲ್ಲಿ ಪರವಾನಿಗೆ ನೀಡುವ ಒಂದು ನ್ಯಾಯಬೆಲೆ ಅಂಗಡಿಗೆ ಎಷ್ಟು ರೇಷನ್ ಕಾರ್ಡ್‌ಗಳಿಗೆ ಆಹಾರ ಧಾನ್ಯ ಒದಗಿಸಲು ಅವಕಾಶ ಕಲ್ಪಿಸಲಾಗುವುದು ;

(ಇ) ಈ ತಾಂಡ ಪ್ರದೇಶಗಳಲ್ಲಿ ಪರವಾನಿಗೆ ಪಡೆಯಲು ಇರುವ ವಿಶೇಷ ಮಾನದಂಡಗಳೇನು? (ಸಂಪೂರ್ಣ ವಿವರ ನೀಡುವುದು)

## ರಸ್ತೆ ಮತ್ತು ಚರಂಡಿ ನಿರ್ಮಾಣ ಇಲ್ಲದೆ ನಿವಾಸಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮೭ (೧೯೩೯) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆ ರಾಮನಗರ ಟೌನ್ ವ್ಯಾಪ್ತಿಗೆ ಒಳಪಟ್ಟಿರುವ ಜೀಗೇನಹಳ್ಳಿ ಗ್ರಾಮದ ಗ್ರಾಮಠಾಣೆಯ (ವೂರು) ವ್ಯಾಪ್ತಿಯಲ್ಲಿ ಬರುವ ನಿವೇಶನದಾರರ/ಕಟ್ಟಡದಾರರ ಖಾತೆದಾರರ ಹೆಸರು ಅಳತೆ ಮತ್ತು ಖಾತೆಯ ಸಂಖ್ಯೆ ನೀಡಲಾಗುವುದೇ ;

(ಆ) ಸದರಿ ಗ್ರಾಮಠಾಣೆಯ ವ್ಯಾಪ್ತಿಯಲ್ಲಿ ರಸ್ತೆ ಮತ್ತು ಚರಂಡಿ ನಿರ್ಮಾಣ ಇಲ್ಲದೇ ಮಳೆಗಾಲದಲ್ಲಿ ಇಲ್ಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಬಡಾವಣೆಗೆ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಅಗತ್ಯ ಕ್ರಮಕೈಗೊಳ್ಳಲಾಗುವುದೇ ?

## ಕಟ್ಟಡ ಕಲ್ಲು ಗಣಿಗಾರಿಕೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೮ (೧೯೦೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಮಾನ್ಯ ಕಟ್ಟಡ ಕಲ್ಲು ಹಾಗೂ ಮರಳು ಗಣಿಗಾರಿಕೆಗೆ ಅನುಮತಿ ನೀಡುವ ಪ್ರಾಧಿಕಾರ ಯಾವುದು ; ಈ ರೀತಿಯ ಗಣಿಗಾರಿಕೆ ಲೈಸೆನ್ಸ್ ಪಡೆಯಲು ಇರಬೇಕಾದ ಮೂಲಭೂತ ಸೌಲಭ್ಯಗಳು ಯಾವುವು ;

(ಆ) ರಾಜ್ಯದಲ್ಲಿ ಸಾಮಾನ್ಯ ಕಟ್ಟಡ ಕಲ್ಲು ಗಣಿಗಾರಿಕೆಗೆ ಎಷ್ಟು ಕಡೆಗಳಲ್ಲಿ ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಯಾವ ಯಾವ ಖನಿಜಗಳನ್ನು ಅಪ್ರಧಾನ ಖನಿಜ ಎಂದು ಗುರುತಿಸಲಾಗಿದೆ ? (ವಿವರ ನೀಡುವುದು)

## ವಿದ್ಯುತ್ ಚಾಲಿತ ವಾಹನ ತಯಾರಿಕಾ ಉದ್ಯಮದ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೯ (೧೯೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಚಾಲಿತ ವಾಹನಗಳ ತಯಾರಿಕಾ ಉದ್ಯಮಕ್ಕೆ ಸರ್ಕಾರ ಪ್ರೋತ್ಸಾಹ ನೀಡಲು ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ವಿದ್ಯುತ್ ಚಾಲಿತ ವಾಹನ ತಯಾರಿಕಾ ಕಂಪನಿಗಳು ಇವೆ ; (ವಿವರ ನೀಡುವುದು)

(ಇ) ಈ ಕಂಪನಿಗಳು ವರ್ಷಕ್ಕೆ ಎಷ್ಟು ವಿದ್ಯುತ್ ವಾಹನಗಳನ್ನು ಉತ್ಪಾದಿಸುತ್ತಿವೆ ; ಅದರಲ್ಲಿ ದ್ವಿಚಕ್ರ ವಾಹನಗಳ ಸಂಖ್ಯೆ ಎಷ್ಟು; ನಾಲ್ಕು ಚಕ್ರ ವಾಹನಗಳ ಸಂಖ್ಯೆ ಎಷ್ಟು ?

## ಕೊಳಗೇರಿ ಪ್ರದೇಶಗಳ ಅಭಿವೃದ್ಧಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೬೦ (೧೯೦೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರದ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗೆ ನಗರಾಭಿವೃದ್ಧಿ ಇಲಾಖೆಯ ಮೂಲಕ ಕೈಗೊಂಡ ಕಾರ್ಯಕ್ರಮಗಳು ಯಾವುವು ;

(ಆ) ಕಳೆದ ೩ ವರ್ಷಗಳ ಅವಧಿಯಲ್ಲಿ ಕೊಳಗೇರಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಎಷ್ಟು ಕೊಳಗೇರಿಯ ವಸತಿರಹಿತರಿಗೆ ಮನೆ ಕಟ್ಟಿ ಕೊಡಲಾಗಿದೆ ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ವಾಜಪೇಯಿ ನಗರ ನಿವೇಶನ ಯೋಜನೆಯ ಅನ್ವಯ ಎಷ್ಟು ನಿವೇಶನಗಳನ್ನು ನಗರವಾಸಿಗಳಿಗೆ ವಿತರಿಸಲಾಗಿದೆ ? (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

## MSME ಘಟಕಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೯೧ (೧೯೦೦) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಂಎಸ್‌ಎಂಇ ಕೈಗಾರಿಕಾ ಘಟಕಗಳ ಅಭಿವೃದ್ಧಿಗೆ ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿವೆ ;

(ಆ) ಎಂಎಸ್‌ಎಂಇ ಕೈಗಾರಿಕೆಗಳಿಗಾಗಿ ಎಷ್ಟು ಸ್ಪೆಷಲ್ ಎಕನಾಮಿಕ್ ಜೋನ್‌ಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಎಂಎಸ್‌ಎಂಇ ಘಟಕಗಳು ನೋಂದಣಿಯಾಗಿವೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸಿದ್ದ ಆಹಾರಗಳಲ್ಲಿ ಪ್ರಿಸರ್‌ವೇಟಿವ್ ಬಳಕೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೯೨ (೧೮೯೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಆಹಾರ ಪಾರ್ಕ್‌ಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಆಹಾರ ಪಾರ್ಕ್‌ಗಳಲ್ಲಿ ಯಾವ ರೀತಿಯ ಉತ್ಪನ್ನಗಳನ್ನು ಸಿದ್ದಪಡಿಸಲಾಗುತ್ತದೆ ;

(ಇ) ಆಹಾರ ಸಂಸ್ಕರಣಾ ಘಟಕಗಳಲ್ಲಿ ತಯಾರಾಗುವ ಸಿದ್ದ ಆಹಾರಗಳಲ್ಲಿ ಹೆಚ್ಚಿನ ಪ್ರಮಾಣದ ಪ್ರಿಸರ್‌ವೇಟಿವ್‌ಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸಿದ್ದ ಆಹಾರಗಳಲ್ಲಿ ಹೆಚ್ಚಿನ ಪ್ರಮಾಣದ ಪ್ರಿಸರ್‌ವೇಟಿವ್‌ಗಳನ್ನು ಬಳಸುತ್ತಿರುವುದರಿಂದ ಸಣ್ಣ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮಗಳಾಗುತ್ತಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ?

## ಮೈಸೂರು ನಗರದ ರಿಂಗ್ ರಸ್ತೆಯ ಜಂಕ್ಷನ್‌ಗಳಲ್ಲಿ ಅಂಡರ್ ಪಾಸ್ ನಿರ್ಮಾಣ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೯೩ (೧೯೦೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ರಿಂಗ್ ರಸ್ತೆಯ ಬೋಗಾದಿ, ಮೇಟಗಹಳ್ಳಿ, ಬನ್ನೂರು ರಸ್ತೆ, ತಿ.ನರಸಿಪುರ ರಸ್ತೆ, ನಂಜನಗೂಡು ರಸ್ತೆ, ಕೊಲಂಬಿಯಾ ಏಷಿಯಾ ಜಂಕ್ಷನ್‌ಗಳಲ್ಲಿ ಉಂಟಾಗುತ್ತಿರುವ ವಾಹನ ದಟ್ಟಣೆ ಮತ್ತು ವಾಹನ ಅಪಘಾತಗಳನ್ನು ತಪ್ಪಿಸಲು ಅಂಡರ್ ಪಾಸ್‌ಗಳನ್ನು ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ;

(ಆ) ಈ ಅಂಡರ್ ಪಾಸ್‌ಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ನೆರವು ಪಡೆಯಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ?

# ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸ್ಥಾಪನೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೪ (೧೯೦೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ಪ್ರಸಕ್ತ ಕುಡಿಯುವ ನೀರಿನ ಬೇಡಿಕೆಯ ಪ್ರಮಾಣ ಎಷ್ಟು; ಈಗ ವಿವಿಧ ಮೂಲಗಳಿಂದ ಸರಬರಾಜಾಗುತ್ತಿರುವ ನೀರಿನ ಪ್ರಮಾಣ ಎಷ್ಟು ;

(ಆ) ಮೈಸೂರು ನಗರಕ್ಕೆ ಹಾಗೂ ಸುತ್ತಮುತ್ತಲ ಹೊಸ ಬಡಾವಣೆಗಳಿಗೆ ನೀರು ಸರಬರಾಜು ಮಾಡುವ ಬಗ್ಗೆ ಪ್ರಸ್ತುತ ಯಾವ ಯಾವ ಹೊಸ ಯೋಜನೆಗಳನ್ನು ರೂಪಿಸಲಾಗಿದೆ; ಯಾವ ಯೋಜನೆಗಳು ಕಾರ್ಯರೂಪದಲ್ಲಿವೆ; ಯಾವ ಯಾವ ಯೋಜನೆಯಲ್ಲಿ ಪೂರ್ಣಗೊಂಡಿವೆ ಹಾಗೂ ಇನ್ನೂ ಬಾಕಿ ಇರುವ ಕಾಮಗಾರಿಗಳ ವಿವರ ನೀಡುವುದು ;

(ಇ) ಮೈಸೂರು ನಗರಕ್ಕೆ ನೀರು ಸರಬರಾಜು ಮಾಡುತ್ತಿರುವ ಹಾಗೂ ಹೊಸದಾಗಿ ಕಾರ್ಯರೂಪಕ್ಕೆ ಬರುತ್ತಿರುವ ಯೋಜನೆಗಳನ್ನು ಸಮಗ್ರವಾಗಿ ಮೈಸೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಸ್ಥಾಪಿಸಿ ಅದರ ವ್ಯಾಪ್ತಿಯಲ್ಲಿ ತರಲು ಕ್ರಮ ಜರುಗಿಸಲಾಗುವುದೇ ; ಮಹಾರಾಜರ ಕಾಲದಲ್ಲಿ ಸ್ಥಾಪಿತವಾಗಿದ್ದ ವಾಣಿವಿಲಾಸ ವಾಟರ್ಸ್ ವರ್ಕ್ಸ್‌ನ್ನು ಮೈಸೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಎಂದು ಪುನರ್‌ರೂಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0212/500 ಪ್ರತಿಗಳು/16–03–2021